♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

askಮೈಸೂರು®

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 07 | ಸಂಚಿಕೆ Issue 17 | ಭಾನುವಾರ Sunday | 21-04-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಲೋಕಸಭೆ ಚುನಾವಣೆ ನಂತರ ರಾಜ್ಯದಲ್ಲಿ ಜೆಡಿಎಸ್ ಪಕ್ಷ ಪತನ


ರಾಜ್ಯದ ಅಭಿವೃದ್ಧಿಗೆ ಕಾಂಗ್ರೆಸ್ ಬೆಂಬಲಿಸಿ: ಸಿದ್ದರಾಮಯ್ಯ

■ ಕಾಯಕಯೋಗಿ ಸುದ್ದಿ

ಕೃಷ್ಣರಾಜಪೇಟೆ: ಬಡಜನರ ಕಲ್ಯಾಣಕ್ಕಾಗಿ ಅನುಷ್ಠಾನಗೊಳಿಸಿರುವ ಗ್ಯಾರಂಟಿ ಕಾರ್ಯಕ್ರಮಗಳನ್ನು ನಿಲ್ಲಿಸುವ ಪ್ರಶ್ನೆಯೇ ಇಲ್ಲಾ, ಸ್ವಾರ್ಥ ಸಾಧನೆಗಾಗಿ ಕೋಮುವಾದಿ ಪಕ್ಷದ ಜೊತೆ ಕೈಜೋಡಿಸಿರುವ ಜೆಡಿಎಸ್ ಅಭ್ಯರ್ಥಿ ಕುಮಾರಸ್ವಾಮಿ ಅವರನ್ನು ಸೋಲಿಸಿ ಜಿಲ್ಲೆಯ ಮಗನಾದ ಸ್ಟಾರ್ ಚಂದ್ರು ಅವರನ್ನು ಬೆಂಬಲಿಸಿ ಗೆಲ್ಲಿಸಿ ಎಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಕೈಮುಗಿದು ಮನವಿ ಮಾಡಿದರು.

ಕೆ.ಆರ್.ಪೇಟೆ ಪಟ್ಟಣದ ಪುರಸಭಾ ಮೈದಾನದಲ್ಲಿ ಮಂಡ್ಯ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಅವರ ಪರವಾಗಿ ಆಯೋಜಿಸಿದ್ದ ಬೃಹತ್ ಪ್ರಚಾರ ಸಭೆಯನ್ನು ಉದ್ಘಾಟಿಸಿ ಕಾಂಗ್ರೆಸ್ ಅಭ್ಯರ್ಥಿ ಪರ ಮಾತಯಾಚನೆ ಮಾಡಿ ಮಾತನಾಡಿದರು.

ಬಸವಾಧಿ ಶರಣರ ತತ್ವ ಸಂದೇಶಗಳನ್ನು ಪಾಲಿಸುತ್ತಿರುವ ಕಾಂಗ್ರೆಸ್ ಪಕ್ಷವು ಕಳೆದ ವಿಧಾನಸಭಾ ಚುನಾವಣೆಯ ಸಂಧರ್ಭದಲ್ಲಿ ಕೊಟ್ಟ ಮಾತಿನಂತೆ ಪಂಚ ಗ್ಯಾರಂಟಿಗಳನ್ನು ಈಡೇರಿಸಿದ್ದೇವೆ. ರಾಜ್ಯದ ಮೂರುವರೆ ಕೋಟಿ ಕುಟುಂಬಗಳು ತಿಂಗಳಿಗೆ ನಾಲ್ಕು ಸಾವಿರದಿಂದ ಐದು ಸಾವಿರ ರೂಪಾಯಿಗಳ ವರೆಗೆ ಸರ್ಕಾರದಿಂದ ಸಹಾಯ ಪಡೆಯುತ್ತಿವೆ. ಅಧಿಕಾರದಲಿದ್ದಾಗ ಯಾವುದೇ ಜಾನ ಪರವಾದ ಕೆಲಸ ಮಾಡದ ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳು ಜನತೆಯ ಶೋಷಣೆ ಮಾಡಿ ವಂಚಿಸಿವೆ. ಪ್ರಧಾನಿ ನರೇಂದ್ರ ಮೋಧಿ ಅವರು ಕಳೆದ 10ವರ್ಷಗಳಿಂದ ಸುಳ್ಳು ಹೇಳುತ್ತಾ ಭಾವನಾತ್ಮಕ ವಿಚಾರಗಳನ್ನು ಪ್ರಸ್ತಾಪ ಮಾಡುತ್ತಾ ಚುನಾವಣೆಯ ಸಂಧರ್ಭದಲ್ಲಿ ಮಾತ್ರ ರಾಜ್ಯವನ್ನು ನೆನೆದುಕೊಂಡು ರೋಡ್ ಶೋ ಮಾಡಲು ಮತಪ್ರಚಾರ ಮಾಡಲು ಮಾತ್ರ ರಾಜ್ಯಕ್ಕೆ ಬರುತ್ತಿದ್ದಾರೆ. ಜಾತ್ಯತೀತ ಜನತಾದಳ ಎಂದು ಹೆಸರಿಟ್ಟುಕೊಂಡಿರುವ ಜೆಡಿಎಸ್ ಪಕ್ಷವು ಕೋಮುವಾದಿ ಪಕ್ಷಕೊಂದಿಗೆ ಹೊಂದಾಣಿಕೆ ಮಾಡಿಕೊಂಡು ಸ್ಪರ್ಧೆ ಮಾಡಿರುವುದರಿಂದ ಜಾತ್ಯತೀತ ಎಂಬ ಪದವನ್ನು ತೆಗೆದು ಹಾಕಬೇಕು ಎಂದು ಸಿದ್ದರಾಮಯ್ಯ ಆಗ್ರಹಿಸಿದರು. ಲೋಕಸಭಾ ಚುನಾವಣೆಯ ನಂತರ ರಾಜ್ಯದಲ್ಲಿ ಜೆಡಿಎಸ್ ಪಕ್ಷವು ಅಸ್ತಿತ್ವದಲ್ಲಿ ಇರುವುದಿಲ್ಲ ಆದ್ದರಿಂದ ಬಡವರ ಪರವಾಗಿ ಕೆಲಸ ಮಾಡುತ್ತಿರುವ ಕೊಟ್ಟ ಮಾತಿನಂತೆ ನಡೆದು ಜನಪರವಾದ ಕಾರ್ಯಕ್ರಮಗಳನ್ನು ಅನು?ಾನಗೊಳಿಸಿರುವ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಿ, ಜಿಲ್ಲೆ ಹಾಗೂ ರಾಜ್ಯದ ಸಮಗ್ರವಾದ ಅಭಿವೃದ್ಧಿಗೆ ಕಾಂಗ್ರೆಸ್ ಬೆಂಬಲಿಸಿ ಎಂದು ಸಿದ್ದರಾಮಯ್ಯ ಮನವಿ ಮಾಡಿದರು.



ರಾಜ್ಯದ ಉಪ ಮುಖ್ಯಮಂತ್ರಿ ಹಾಗೂ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ್ ಮಾತನಾಡಿ ಸ್ವಾರ್ಥ ಸಾಧನೆ ಮಾಡುತ್ತಿರುವ ಅಪ್ಪ ಮಕ್ಕಳ ಪಕ್ಷವು ಲೋಕಸಭಾ ಚುನಾವಣೆ ನಂತರ ರಾಜ್ಯದಲ್ಲಿ ಇರುವುದಿಲ್ಲ. ಹಾಸನದಲ್ಲಿ ಪ್ರಜ್ವಲ್ ಸೋಲುವುದು ಖಚಿತ, ಮಂಡ್ಯದಲ್ಲಿ ಕುಮಾರಸ್ವಾಮಿ ಸೋಲುವುದು ನಿಶ್ಚಿತ, ಬೆಂಗಳೂರು ಗ್ರಾಮಾಂತರದಲ್ಲಿ ಡಾ. ಮಂಜುನಾಥ್ ಸೋಲುವುದು ಖಚಿತ ಎಂದು ಭವಿಷ್ಯ ನುಡಿದ ಡಿ.ಕೆ. ಶಿವಕುಮಾರ್ ಅಧಿಕಾರದಲ್ಲಿದ್ದಾಗ ಯಾವುದೇ ಅಭಿವೃದ್ಧಿ ಕೆಲಸ ಮಾಡದ ಅಪ್ಪ ಮಕ್ಕಳು ಕಾಂಗ್ರೆಸ್ ಪಕ್ಷದ ಸಹಾಯ ಪಡೆದು ಮುಖ್ಯ ಮಂತ್ರಿ, ಪ್ರಧಾನ ಮಂತ್ರಿ ಯಾದರು. ಪ್ರಸ್ತುತ ರಾಜ್ಯ ಸಭೆಯ ಸದಸ್ಯರಾಗಿರುವ ದೇವೇಗೌಡರು ತಮ್ಮ ಮಿತ್ರ ನರೇಂದ್ರ ಮೋದಿಜಿ ಅವರಿಗೆ ತಿಳಿಸಿ ರಾಜ್ಯದ ಪಾಲಿನ ತೆರಿಗೆ ಹಣವನ್ನು ಕೊಡಿಸಲಿಲ್ಲ. ಸಂಸತ್ತಿನಲ್ಲಿ ರಾಜ್ಯದ ಪರವಾಗಿ ಮಾತನಾಡಲಿಲ್ಲ. ಅಧಿಕಾರದಲ್ಲಿ ಇಲ್ಲದವರು ಹೇಗೆ ರಾಜ್ಯದ ಅಭಿವೃದ್ಧಿ ಮಾಡುತ್ತಾರೆ. ಅಪ್ಪ ಮಕ್ಕಳ ಕಣ್ಣೀರಿನ ನಾಟಕಕ್ಕೆ ಮರುಳಾಗದೆ ರಾಜ್ಯದ ಅಭಿವೃದ್ಧಿ ಹಾಗೂ ಬಡ ಜನರ ಕಲ್ಯಾಣಕ್ಕಾಗಿ ಕೆಲಸ ಮಾಡುತ್ತಿರುವ ಕಾಂಗ್ರೆಸ್ ಸರ್ವರಿಗೂ ಕ್ಷೇಮವನ್ನು ಬಯಸುವ ಪಕ್ಷವಾಗಿದ್ದು ರಾಷ್ಟ್ರದ ಸಮಗ್ರತೆ ಹಾಗೂ ಏಕತೆಗಾಗಿ ದುಡಿಯುತ್ತಿರುವ, ಸರ್ವ ಜನಾಂಗದ ಶಾಂತಿಯ ತೋಟದ ಹೊಂಗನಸು ಹೊತ್ತಿರುವ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿರುವ ಸ್ಟಾರ್ ಚಂದ್ರು ಅವರನ್ನು ಗೆಲ್ಲಿಸಿ ರಾಜ್ಯದ ರೈತರ ಹಿತವನ್ನು ಕಡೆಗಣಿಸಿ ತಮ್ಮ ಮನೆಮಕ್ಕಳ ಉದ್ಧಾರಕ್ಕಾಗಿ ಇಟ್ಟುಕೊಂಡಿರುವ ಜೆಡಿಎಸ್ ಹಾಗೂ ಕೋಮುವಾದಿ ಬಿಜೆಪಿ ಪಕ್ಷವನ್ನು ತಿರಸ್ಕರಿಸಿ ಕಾಂಗ್ರೆಸ್ ಗೆಲ್ಲಿಸಿ, ಕೆ.ಆರ್.ಪೇಟೆ ವಿಧಾನ ಸಭಾ ಕ್ಷೇತ್ರದಿಂದ ಕನಿಷ್ಠ 25ಸಾವಿರ ಮತಗಳ ಲೀಡ್ ಕೊಡಬೇಕು ಎಂದು ಕರೆ ನೀಡಿದರು.

6ನೇ ಪುಟಕ್ಕೆ

ಮಂಡ್ಯ ಸೊಸೆ ಮೈಸೂರಿನಲ್ಲಿ ಪ್ರಚಾರ

'ಕಮಲತಾ' ಒಡೆಯರ್ ಪರ–ಎಚ್'ಡಿಕೆಗೆ ದೂರ

ಮಂಡ್ಯ : 'ಊರಗ್ ಬರೋಳು ನೀರಿಗೆ ಬರೋದಿಲ್ವೆ' ಎಂಬ ಗಾದೆ ಮಾತಿನಂತಾಗಿದೆ ಸ್ವಾಭಿಮಾನಿ ಸುಮಲತಾ ಅಂಬರೀಶ್ ಅವರ ಬಿಜೆಪಿ ಪರವಾದ ನಿಲುವು. ಮಂಡ್ಯ ಲೋಕಸಭಾ ಕ್ಷೇತ್ರದ ಟಿಕೇಟ್'ಗಾಗಿ ಭಾರೀ ಫೈಟ್ ನೀಡಿ ನಿರಾಶೆಯಾದ ಸುಮಲತಾ ಕೊನೆಗೆ ಬಿಜೆಪಿ ಸೇರ್ಪಡೆಯಾಗಿ 'ಕಮಲತಾ' ಆಗಿದ್ದು ಇದೀಗ ಹಳೆಯ ಮಾತಾಗಿದೆ.

ಮಂಡ್ಯ ಲೋಕಸಭಾ ಕ್ಷೇತ್ರದಿಂದ ಮಾಜಿ ಸಿಎಂ ಹೆಚ್ ಡಿ ಕುಮಾರಸ್ವಾಮಿ ಕಣಕ್ಕಿಳಿದಿ ದ್ದಾರೆ. ಮಂಡ್ಯದ ಹಾಲಿ ಸಂಸದೆ ಸುಮಲತಾ ಅಂಬರೀಶ್ ಕುಮಾರಸ್ವಾಮಿ ಪರ ಪ್ರಚಾರ ಮಾಡದೇ ದೂರ ಉಳಿದಿದ್ದು, ಸುಮಲತಾ ಅಂಬರೀಶ್ ಅವರು ಮೈಸೂರು–ಕೊಡುಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಯದುವೀರ್ ಒಡೆಯರ್ ಪರ ಪ್ರಚಾರ ನಡೆಸಿರುವುದು ಹಲವು ಪ್ರಶ್ನೆಗಳಿಗೆ ಕಾರಣವಾಗಿದೆ.



ಟಿಕೇಟ್ ಬಿಟ್ಟುಕೊಟ್ಟ ಬಿಜೆಪಿ ನಿಲುವಿನಿಂದ ಬೇಸರ ಗೊಂಡಿರುವ ಸುಮ ಲತಾ ಅವರ ಮನೆಗೆ ಭೇಟಿ ಕೊಟ್ಟು ಚುನಾ ವಣೆಗೆ ಸಹಕರಿಸು ವಂತೆ ಮನವಿ ಮಾಡಿದ ಎಚ್'ಡಿಕೆ ಅವರಿಂದ ಅಂತರ ಕಾಯ್ದುಕೊಂ ಡಿದ್ದಾರೆ. ಮಂಡ್ಯದ ಹಾಲಿ ಮೈತ್ರಿ ಹಿನ್ನೆಲೆಯಲ್ಲಿ ಜೆಡಿಎಸ್ ಪಕ್ಷಕ್ಕೆ

ಶನಿವಾರ ಮೈಸೂರು ಲೋಕಸಭಾ ಕ್ಷೇತ್ರದಲ್ಲಿ ಮಂಡ್ಯ ಹಾಲಿ ಸಂಸದೆ ಸುಮಲತಾ ಅವರು, ಯದುವೀರ್ ಅವರ ಪರವಾಗಿ ಅಬ್ಬರ ಪ್ರಚಾರ ನಡೆಸಿದ್ದಾರೆ. ಯದುವೀರ್ ಒಡೆಯರ್ ಅವರು ತುಂಬ ಸರಳ ವ್ಯಕ್ತಿ, ನಿಮ್ಮೆಲ್ಲರ ಸೇವೆ ಮಾಡಲು ಬಂದಿದ್ದಾರೆ. ಹೀಗಾಗಿ ಅವರನ್ನ ಗೆಲ್ಲಿಸಿ ಲೋಕಸಭೆಗೆ ಕಳುಹಿಸಿಕೊಡಿ ಎಂದು ಮೈಸೂರು ಜನತೆಯಲ್ಲಿ ಮನವಿ ಮಾಡಿದ್ದಾರೆ.

6ನೇ ಪುಟಕ್ಕೆ

ಯುವತಿ ಕೊಲೆ ಖಂಡಿಸಿ ಪ್ರಗತಿಪರ ಸಂಘಟನೆಗಳಿಂದ ಪ್ರತಿಭಟನೆ

ಮದ್ದೂರು: ಹುಬ್ಬಳ್ಳಿ ಬಿ.ವಿ.ಬಿ ಕಾಲೇಜಿನ ವಿದ್ಯಾರ್ಥಿ ನೇಹಾ ಅವರನ್ನು ಫೈರೋಜ್ ಎಂಬಾತ ಅಮಾನುಷವಾಗಿ ಕೊಲೆ ಮಾಡಿರುವುದನ್ನು ಖಂಡಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆ ಹಾಗೂ ಮದ್ದೂರು ಪ್ರಗತಿಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಪಟ್ಟಣದಲ್ಲಿ ಪ್ರತಿಭಟಿಸಲಾಯಿತು.

ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ಜಿಲ್ಲಾಧ್ಯಕ್ಷ ವಳಗೆರಹಳ್ಳಿ ವಿ.ಸಿ. ಉಮಾಶಂಕರ್ ಅವರು ಮಾತನಾಡಿ, ರಾಜ್ಯದಲ್ಲಿ ದಿನದಿಂದ ದಿನಕ್ಕೆ ಹೆಣ್ಣು ಮಕ್ಕಳ ರಕ್ಷಣೆ ಕಡಿಮೆಯಾಗುತ್ತದೆ. ನೇಹಾ ಅವರನ್ನು ಕೊಲೆ ಮಾಡಿರುವುದು ನಾಗರಿಕ ಸಮಾಜವನ್ನು ತಲೆತಗ್ಗಿಸುವಂತಿದೆ ಈ ಬಗ್ಗೆ ಸರ್ಕಾರ ಸೂಕ್ತ ಗಮನಹರಿಸಿ ಕಾಲಹರಣ ಮಾಡದೆ ಕೊಲೆ ಮಾಡಿರುವ ಆರೋಪಿಯನ್ನು ಗಲ್ಲು ಶಿಕ್ಷೆಗೆ ಗುರಿಪಡಿಸಲು ಕ್ರಮ ವಹಿಸಬೇಕು. ತಪ್ಪಿತಸ್ಥರ ವಿರುದ್ಧ ಮುಲಾಜಿ ಇಲ್ಲದೆ ಕ್ರಮವಹಿಸಿ ಅವರಿಗೆ ಜೀವಾವಧಿ ಶಿಕ್ಷೆ ವಿಧಿಸುವಂತೆ ಸರ್ಕಾರ ಕ್ರಮ ವಹಿಸಬೇಕು ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಇಂಥ ಅಮಾನವೀಯ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕು. ಈ ಪ್ರಕರಣಕ್ಕೂ ನಮಗೂ ಯಾವುದೇ ಸಂಬಂಧವಿಲ್ಲವೆಂಬಂತೆ ಸರ್ಕಾರ ವರ್ತಿಸಬಾರದು. ಸಮಾಜಘಾತಕ ಶಕ್ತಿಗಳನ್ನು ಮಟ್ಟ ಹಾಕಲು ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸಬೇಕು ಎಂದು ಒತ್ತಾಯಿಸಿದರು.

ವಲಸಿಗರಿಗೆ ಒಲಿಯುವುದೆ ಮಂಡ್ಯ 'ಸಕ್ಕರೆ'

ಅಸ್ತಿತ್ವದ ಉಳಿವಿಗೆ 'ದಳಪತಿ–ಸ್ಟಾರ್' ಫೈಟ್

■ ಶಿವಯೋಗಿ

ಮಂಡ್ಯ: ಎಂಟು ವಿಧಾನಸಭಾ ಕ್ಷೇತ್ರಗಳನ್ನೊಳಗೊಂಡ ಮಂಡ್ಯ ಲೋಕಸಭಾ ಕ್ಷೇತ್ರ ಮೂಲತ: ಜಾ.ದಳ ಭದ್ರಕೋಟೆಯಾಗಿದ್ದರೂ ಕಳೆದ ವಿಧಾನಸಭೆ ಚುನಾವಣೆಯಲ್ಲಿ 'ಕೈ' ವಶವಾಗಿದೆ. ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಹಾಗೂ ಸಚಿವ ಎನ್.ಚಲುವರಾಯಸ್ವಾಮಿ ನಡುವಿನ 'ಹಳೇದೋಸ್ತಿ–ಹೊಸಕುಸ್ತಿ' ಜಿದ್ದಾಜಿದ್ದಿ ಕಣವಾಗಿರುವ ಮಂಡ್ಯ ಹೈವೋಲ್ಟೇಜ್ ಕ್ಷೇತ್ರ.

ಆಡಳಿತರೂಢ ಕಾಂಗ್ರೆಸ್ ಜಿಲ್ಲೆಯಲ್ಲಿ ನಮ್ಮದೇ ಪಾರುಪತ್ಯ ಎಂಬ ಸಂದೇಶವನ್ನು ಮಾರ್ಧನಿಸುತ್ತಿದ್ದಾರೆ. ಕಳೆದ ವಿಧಾನಸಭೆ–ಲೋಕಸಭೆ ಸೋಲಿನಿಂದ ಕಂಗೆಟ್ಟಿರುವ ದಳಪತಿಗಳು ಮಂಡ್ಯದಲ್ಲಿ ಮತ್ತೆ ಪಾರುಪತ್ಯ ಸ್ಥಾಪಿಸಲು ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡು ಮಂಡ್ಯ ಕೋಟೆಗೆ ನುಗ್ಗಿದ್ದಾರೆ.

2019ರ 'ಲೋಕ' ಚುನಾವಣೆಯಲ್ಲಿ ಪರಾಭವಗೊಂಡಿದ್ದ ನಿಖಿಲ್ಕುಮಾರಸ್ವಾಮಿ ಸೋಲನ್ನು ಸವಾಲಾಗಿ ಸ್ವೀಕರಿಸಿರುವ ಮಾಜಿ ಸಿಎಂ ಎಚ್'ಡಿಕೆ ತಮ್ಮ ಅಪಾರ ಬೆಂಬಲಿಗರ ಹಾಗೂ ಜಾ.ದಳ ಶಾಸಕರ ಒತ್ತಾಯದ ಮೇರೆಗೆ ಅದೃಷ್ಟ ಪರೀಕ್ಷೆಗಾಗಿ ಮಂಡ್ಯದತ್ತ ವಲಸೆ ಬಂದಿದ್ದಾರೆ.

ಮೂಲತ: ಮಂಡ್ಯಜಿಲ್ಲೆ ನಾಗಮಂಗಲ ತಾಲ್ಲೂಕಿನ ಉದ್ಯಮಿ ವೆಂಕಟರಮಣೇಗೌಡ(ಸ್ಟಾರ್ಚಂದ್ರು) ಸಚಿವ ಎನ್.ಚಲುವರಾಯಸ್ವಾಮಿಯವರ ರಾಜಕೀಯ ಪ್ರಯೋಗಶಾಲೆಯ ಶಿಶುವಾಗಿ ಕಣಕ್ಕಿಳಿದು ಇಡೀ ಜಿಲ್ಲೆಯಲ್ಲಿ ಅಬ್ಬರದ ಪ್ರಚಾರ ಮಾಡುತ್ತಿದ್ದಾರೆ.

ಡಿಶುಂಡಿಶುಂ : ಇಲ್ಲಿ ದಳಪತಿಗಳ ಜೊತೆಗೆ ಬಿಜೆಪಿಗರ ಅಬ್ಬರದ ಆರೋಪ ಪ್ರತ್ಯಾರೋಪಗಳೇ ಏಟು–ಎದುರೇಟುಗಳಾಗಿ ಅಪ್ಪಳಿಸುತ್ತಿರುವ ಸನ್ನಿವೇಶದಲ್ಲಿ ಮೈತ್ರಿ ಅಭ್ಯರ್ಥಿ ಹಾಗೂ ಕಾಂಗ್ರೆಸ್ ಅಭ್ಯರ್ಥಿಯ ಪರ ಪ್ರಚಾರದ ಅಬ್ಬರದಲ್ಲಿ ಒಂದಷ್ಟು ಸಲ್ಲದ ಮಾತುಗಳು ಸಭ್ಯತೆಯ ಮಿತಿ ದಾಟಿ ಹೋಗಿದ್ದು ವಿಪರ್ಯಾಸದ ಸಂಗತಿ.



ಮಂಡ್ಯ ಜಿಲ್ಲೆಯ ಜೀವನಾಡಿ ಕಾವೇರಿ ನದಿವಿವಾದ ಸೇರಿದಂತೆ ಜಿಲ್ಲೆಯ ಜ್ವಲಂತ ಸಮಸ್ಯೆಗಳನ್ನು ಶಾಶ್ವತವಾಗಿ ಪರಿಹರಿಸಿ ರೈತರು, ಮಹಿಳೆಯರು, ದೀನ ದಲಿತರ ಏಳ್ಗೆಗೆ ಹೊಸ ಯೋಜನೆಗಳನ್ನು ಅನುಷ್ಠಾನಗೊಳಿಸಬೇಕಿದೆ. ಮತ್ತೊಮ್ಮೆ ದೇಶದಲ್ಲಿ ಮೋದಿ ಸರ್ಕಾರ ಆಡಳಿತದ ಚುಕ್ಕಾಣಿ ಹಿಡಿಯಬೇಕೆಂಬ ಜಿಲ್ಲೆಯ ಜನತೆಯ ಆಶಯ ನನ್ನನ್ನು ಗೆಲ್ಲಿಸುವ ಭರವಸೆ ಇದೆ.

– ಎಚ್.ಡಿ.ಕುಮಾರಸ್ವಾಮಿ,
ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿ.



ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ಹಾಗೂ ಕಾಂಗ್ರೆಸ್ ಪ್ರಣಾಳಿಕೆ ಈ ಬಾರಿ ಚುನಾವಣೆಯ ಗೆಲುವಿಗೆ ಸಹಕಾರಿಯಾಗಲಿವೆ. ಮಂಡ್ಯ ಜಿಲ್ಲೆಯ ರೈತನ ಮಗನಾಗಿ ಈ ಜಿಲ್ಲೆಯ ಋಣ ತೀರಿಸಲು ನನಗೊಂದು ಅವಕಾಶ ಕಲ್ಪಿಸ ಬೇಕೆಂಬ ಮನವಿಗೆ ಜನಸ್ಪಂದನೆ ಬಹಳ ಚೆನ್ನಾಗಿದೆ. ಸಚಿವರಾದ ಎನ್.ಚಲುವರಾಯಸ್ವಾಮಿ ಹಾಗೂ ಜಿಲ್ಲೆಯ ಎಲ್ಲಾ ಶಾಸಕರ ಬಹುದೊಡ್ಡ ಪರಿಶ್ರಮ ಮತ್ತು ಜನರ ಆಶೀರ್ವಾದ ನನ್ನ ಮೇಲಿದೆ.

–ವೆಂಕಟರಮಣೇಗೌಡ(ಸ್ಟಾರ್ಚಂದ್ರು)
ಕಾಂಗ್ರೆಸ್ ಅಭ್ಯರ್ಥಿ

ಒಟ್ಟು ಮತದಾರರು
17,79,239

ಪುರುಷರು	–8,76,112,
ಮಹಿಳೆಯರು	–9,02,959
ಇತರೆ	–168

ಮದ್ದೂರು ಶಾಸಕ ಕೆ.ಎಂ.ಉದಯ್ ಅವರಾಡಿದ ಗಂಡಸ್ತನದ ಮಾತು ರಾಜಕಾರಣಿಗಳು ಎಲ್ಲಿಗೆ ತಲುಪಿದ್ದಾರೆ ಎಂದು ಜನ ಪ್ರಶ್ನಿಸಿಕೊಳ್ಳುವಂತಾಗಿದೆ.

ಕಾಂಗ್ರೆಸ್ ನಾಯಕರ ಅಹಂಕಾರದ ಮಾತುಗಳು ಮೈತ್ರಿ ಅಭ್ಯರ್ಥಿಗೆ ಒಂದಷ್ಟು ಅನುಕಂಪ ಮೂಡಿಸಿರುವುದು ಸುಳ್ಳಲ್ಲ. ಇದಕ್ಕೆ ಪ್ರತಿಯಾಗಿ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರು ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ನಂಬಿ ಮಹಿಳೆಯರು ದಾರಿ ತಪ್ಪುತ್ತಿದ್ದಾರೆಂಬ ಹೇಳಿಕೆ ಕೈ ಪಾಳ ಯಕ್ಕೆ ಪಕ್ಕಾ ಅಸ್ತ್ರವಾಗಿ ಸಿಕ್ಕಿ, ಅದಕ್ಕೆ ಮಹಿಳೆಯ ರಿಂದಲೇ ಪ್ರತಿಭಟನೆಯ ಉಗ್ರ ರೂಪ ಕೊಡಿಸಿದ ಆಡಳಿತ ಪಕ್ಷ ಒಂದಷ್ಟು ಮತ ಗಳನ್ನು ಬಾಚಿಕೊಳ್ಳುವ ಸಾಹಸ ಮಾಡಿತು. ಅಷ್ಟರಲ್ಲೇ ಕುಮಾರಸ್ವಾಮಿ ಅವರು ಎಚ್ಚೆತ್ತುಕೊಂಡು ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಳ್ಳುತ್ತಲೇ ವಿಷಾಧ ವ್ಯಕ್ತ ಪಡಿಸಿ ನನ್ನ ಮಾತಿನಿಂದ ನನ್ನ ತಾಯಂ ದಿರಿಗೆ ನೋವಾಗಿದ್ದರೆ ಕ್ಷಮೆ ಕೋರುವು ದಾಗಿ ಡ್ಯಾಮೇಜ್ ಕಂಟ್ರೋಲ್'ಗೆ ಕೈ ಹಾಕಿದ್ದು ಒಂದು ರೀತಿಯ ಏಟು ಎದುರೇಟು ನೀಡಿದಂತಹ ನಡೆ ಮತದಾರರು ಮೂಗಿನ ಮೇಲೆ ಬೆರಳಿಟ್ಟುಕೊಳ್ಳುವಂತೆ ಮಾಡಿತು.

ಅನುಕೂಲಸಿಂಧು

ಇಂತಹ ಸನ್ನಿವೇಶದಲ್ಲಿ ಮೈತ್ರಿ ಅಭ್ಯರ್ಥಿ ಕುಮಾರಸ್ವಾಮಿಗೆ ಬಹುದೊಡ್ಡ ಶಕ್ತಿಯಾಗಿ ಪ್ರಚಾರದಲ್ಲಿರುವುದು ಮೂರು ಅಂಶಗಳು. ಮೋದಿ ಅಲೆ, ಸಾಲಮನ್ನಾ ಹಾಗೂ ಜಿಲ್ಲೆಯ ನಿಕಟ ಸಂಪರ್ಕದ ವಿಚಾರ. ಕಾಂಗ್ರೆಸ್ ಅಭ್ಯರ್ಥಿಗೆ ನಾನು ಮಂಡ್ಯ ಜಿಲ್ಲೆಯ ಮಗ ಹಾಗೂ ಆಡಳಿತ ಪಕ್ಷದ ಗ್ಯಾರಂಟಿ ಯೋಜನೆಗಳ ಪ್ರಚಾರ ಬೆಂಬಲವಾಗಿವೆ. ಇದರೊಂದಿಗೆ ಹಣ ಬಲವೂ ಪೂರಕವಾಗಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ತಮ್ಮ ಕಡುವಿರೋಧಿ ಕುಮಾರಸ್ವಾಮಿ ವಿರುದ್ಧ ತೊಡೆ ತಟ್ಟಿ ನಿಂತಿರುವುದು ಸ್ಟಾರ್ ಚಂದ್ರು ಅವರಿಗಿರುವ ಬಹುದೊಡ್ಡ ಬಾಹುಬಲ.

ಜಿಲ್ಲೆಯಲ್ಲಿ 'ಕೈ' ಮೇಲುಗೈ

ಮಂಡ್ಯ–ಕಾಂಗ್ರೆಸ್, ಮದ್ದೂರು–ಕಾಂಗ್ರೆಸ್, ಶ್ರೀರಂಗಪಟ್ಟಣ–ಕಾಂಗ್ರೆಸ್, ನಾಗಮಂಗಲ–ಕಾಂಗ್ರೆಸ್, ಮಳವಳ್ಳಿ–ಕಾಂಗ್ರೆಸ್, ಮೇಲುಕೋಟೆ–ರೈತಸಂಘ (ಕಾಂಗ್ರೆಸ್ ಬೆಂಬಲಿತ), ಕೆ.ಆರ್.ಪೇಟೆ–ಜೆಡಿಎಸ್, ಕೆ.ಆರ್.ನಗರ–ಜೆಡಿಎಸ್.

ರಾಹುಲ್'ಗಾಂಧಿ ಎಂಟ್ರಿ ಚಂದ್ರು ಸ್ಟಾರ್ ಬದಲಿಸಲಿದೆಯಾ?

ಹೌದು ಹೀಗೊಂದು ಮಾತು ಪ್ರಚಲಿತದಲ್ಲಿದೆ. ರಾಷ್ಟ್ರಮಟ್ಟದಲ್ಲಿ ಪ್ರದಾನಿ ಮೋದಿ ವಿರುದ್ಧ ತೊಡೆ ತಟ್ಟಿ ಪ್ರಬಲ ವಿರೋಧ ಕೊಡುತ್ತಿರುವ ರಾಹುಲ್'ಗಾಂಧಿ ಮೈತ್ರಿ ಅಖಾಡದಲ್ಲಿ ಚಳಿ ಹುಟ್ಟುಹಾಕಿದ್ದಾರೆಂದು ಕಾಂಗ್ರೆಸ್ ಮುಖ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-2

21-04-2024

ಮಂಡ್ಯ

ಜಿಲ್ಲಾ ಮಟ್ಟದ ನಮ್ಮ ನಡೆ ಮತಗಟ್ಟೆಯ ಕಡೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ಸಾರ್ವತ್ರಿಕ ಲೋಕಸಭಾ ಚುನಾವಣೆ 2024ರ ಸಂಬಂಧ ಮತದಾರರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಮಂಡ್ಯ ನಗರಸಭೆ ವ್ಯಾಪ್ತಿಯ ರೋಟರಿ ವಿದ್ಯಾಸಂಸ್ಥೆಯಲ್ಲಿ ಏ.21ರಂದು ಬೆಳಿಗ್ಗೆ 8 ಗಂಟೆಗೆ ಜಿಲ್ಲಾ ಮಟ್ಟದ ನಮ್ಮ ನಡೆ ಮತಗಟ್ಟೆಯ ಕಡೆ ಎಂಬ ಚುನಾವಣಾ ಧ್ವಜಾರೋಹಣ ಕಾರ್ಯಕ್ರಮವನ್ನು ರಾಷ್ಟ್ರೀಯ ಹಬ್ಬದ ಮಾದರಿಯಲ್ಲಿ ಆಚರಿಸಲಾಗುವುದು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಸದಸ್ಯ ಕಾರ್ಯದರ್ಶಿ ಕೆ.ಪಿ.ಸಂಜೀವಪ್ಪ ತಿಳಿಸಿದ್ದಾರೆ.

ಧ್ವಜಾರೋಹಣದ ನಂತರ ರೋಟರಿ ವಿದ್ಯಾಸಂಸ್ಥೆಯ ಮುಂಭಾಗದಿಂದ (ಬೆಂಗಳೂರು – ಮೈಸೂರು ಹೆದ್ದಾರಿ ಮಾರ್ಗವಾಗಿ) ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾ ಅಧಿಕಾರಿಯವರ ಕಚೇರಿ ಆವರಣದವರೆಗೆ ಬೈಕ್ ಮತ್ತು ಸೈಕಲ್ ಜಾಥಾದ ಮೂಲಕ ಜಿಲ್ಲೆಯ ಪ್ರತಿಯೊಬ್ಬ ಅರ್ಹ ಮತದಾರರು ಏಪ್ರಿಲ್ 26ರಂದು ತಪ್ಪದೇ ಮತ ಚಲಾಯಿಸುವಂತೆ ಜಾಗೃತಿ ಮೂಡಿಸಲಾಗುವುದು.

"ನಮ್ಮ ನಡೆ ಮತಗಟ್ಟೆಯ ಕಡೆ" ಎಂಬ ಚುನಾವಣಾ ಧ್ವಜಾರೋಹಣ ಕಾರ್ಯಕ್ರಮವನ್ನು ಏಪ್ರಿಲ್ 21ರಂದು ಬೆಳಿಗ್ಗೆ 8 ಗಂಟೆಗೆ ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ರಾಷ್ಟ್ರೀಯ ಹಬ್ಬದ ಮಾದರಿಯಲ್ಲಿ ಮತಗಟ್ಟೆ ಹಂತದಲ್ಲಿ, ಮತಗಟ್ಟೆ ಅಧಿಕಾರಿಗಳ ನೇತೃತ್ವದಲ್ಲಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ನೇತೃತ್ವದಲ್ಲಿ, ಅದೇ ರೀತಿ ಜಿಲ್ಲಾಮಟ್ಟದಲ್ಲಿ ಜಿಲ್ಲಾ ಚುನಾವಣಾ ಅಧಿಕಾರಿಗಳ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿ.ವಿ.ಸಿ ಕೇಂದ್ರಕ್ಕೆ ಭೇಟಿ

ಮಂಡ್ಯ : ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಅಗತ್ಯ ಸೇವಾ ವಲಯದಡಿ ಕಾರ್ಯನಿರ್ವಹಿಸುತ್ತಿರುವ 1022 ಸಿಬ್ಬಂದಿಗಳಿಗೆ ಮತದಾನದ ವ್ಯವಸ್ಥೆಯನ್ನು ಮಂಡ್ಯ ವಿಶ್ವವಿದ್ಯಾಲಯದ ಕಲಾ ವಿಭಾಗದಲ್ಲಿ ಪಿ.ವಿ.ಸಿ ಕೇಂದ್ರ ತೆರೆದು ನಿರ್ವಹಿಸಲಾಗುತ್ತಿದೆ.

ಅಂಚೆ ಮತದಾನವು ಏ.19, 20 ಹಾಗೂ 21 ರಂದು ನಡೆಯಲಿದ್ದು, ಜಿಲ್ಲಾಧಿಕಾರಿ ಡಾ: ಕುಮಾರ ಅವರು ಇಂದು ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸಂತೋಷ್‌ಗೆ 868ನೇ ರ‍್ಯಾಂಕ್

ಮಂಡ್ಯ : ಯುಪಿಎಸ್‌ಸಿ ನಡೆಸಿದ ಐಎಎಸ್ ಪರೀಕ್ಷೆಯಲ್ಲಿ ಮಂಡ್ಯ ನಗರದ ಸಂಪ್ರೀತ್ ಸಂತೋಷ್ 868ನೇ ರ‍್ಯಾಂಕ್ ಪಡೆಯುವ ಮೂಲಕ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಮೂಲತಃ ಮಂಡ್ಯ ನಗರದ ಗಾಂಧಿನಗರದ ನಿವಾಸಿಯಾಗಿರುವ ಸಂಪ್ರೀತ್ ಸಂತೋಷ್ ಅವರ ತಂದೆ ಎಸ್.ಎಚ್.ಸಂತೋಷ್‌ಕುಮಾರ್ ಸಹಕಾರ ಇಲಾಖೆಯಲ್ಲಿ ಜಂಟಿ ನಿಬಂಧಕರಾಗಿ ಕಾರ್ಯ ನಿರ್ವಹಿಸಿ ನಿವೃತ್ತರಾಗಿದ್ದಾರೆ.ಸಂಪ್ರೀತ್ ಸಂತೋಷ್ ಪ್ರಾಥಮಿಕ ಶಿಕ್ಷಣವನ್ನು ಅಭಿನವ ಭಾರತಿ ವಿದ್ಯಾಕೇಂದ್ರದಲ್ಲಿ ಮುಗಿಸಿ ನಂತರ ಪ್ರೌಢಶಿಕ್ಷಣವನ್ನು ಹಾಗೂ ಬೆಂಗಳೂರಿನ ಕಾರ್ಮೆಲ್‌ಕಾನ್ವೆಂಟ್‌ನಲ್ಲಿ ಹಾಗೂ ಇಂಜಿನಿಯರಿಂಗ್ ಮೆಕಾನಿಕಲ್ ಪದವಿಯನ್ನು ಪಿಇಎಸ್‌ಐಟಿ ಮುಗಿಸಿದ್ದರು. ನಂತರ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಮೂರು ಬಾರಿ ನೇರ ಸಂದರ್ಶನದಲ್ಲಿ ಭಾಗಿಯಾಗಿ ವಿಫಲವಾಗಿ, ನಂತರ ನಾಲ್ಕನೇ ಬಾರಿಗೆ 868ನೇ ರ‍್ಯಾಂಕ್ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆಂದು ಕೆಪಿಸಿಸಿ ರಾಜ್ಯ ಸಂಚಾಲಕ ದೀಪಕ್ ಕೆ.ಎನ್.ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುವತಿ ಹತ್ಯೆ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸುವಂತೆ ಒತ್ತಾಯ

■ ಕಾಯಕಯೋಗಿ ಸುದ್ದಿ

ಮಂಡ್ಯ: ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹಿರೇಮಠ್ ಎಂಬ ಯುವತಿಯನ್ನ ಹತ್ಯೆ ಮಾಡಿದ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸುವಂತೆ ಒತ್ತಾಯಿಸಿ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಮಂಡ್ಯದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿದರು.

ನಗರದ ಸಂಜಯವೃತ್ತದಿಂದ ಮೆರವಣಿಗೆ ಹೊರಟ ಹಿಂದೂ ಸಂಘಟನೆಗಳ ಕಾರ್ಯಕರ್ತರು 'ಜಸ್ಟಿಸ್ ಫಾರ್ ನೇಹಾ' ಘೋಷಣೆ ಕೂಗುತ್ತಾ ಸಾಗಿದರು. ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ನಂತರ ಜಿಲ್ಲಾಧಿಕಾರಿ ಕಚೇರಿ ಬಳಿ ಜಮಾವಣೆಗೊಂಡು ವಿದ್ಯಾರ್ಥಿನಿ ನೇಹಾ ಹತ್ಯೆ ಪ್ರಕರಣಕ್ಕೆ ಆಕ್ರೋಶ ವ್ಯಕ್ತಪಡಿಸಿದರು.



ವೈಯಕ್ತಿಕ ಕಾರಣದಿಂದ ವಿದ್ಯಾರ್ಥಿನಿ ನೇಹಾ ಹತ್ಯೆಯಾಗಿದೆ ಎಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಲವ್ ಜಿಹಾದ್ ಅಲ್ಲ, ಇಂತಹ ಘಟನೆಗಳು ಆಕಸ್ಮಿಕವಾಗಿ ನಡೆಯುತ್ತವೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿರುವುದು ಸರಿಯಲ್ಲ ಎಂದರು.

ಹತ್ಯೆಯಾದ ವಿದ್ಯಾರ್ಥಿನಿ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಕಾಂಗ್ರೆಸ್ ಸದಸ್ಯ ನಿರಂಜನಯ್ಯ ಹಿರೇಮಠ ಪುತ್ರಿಯಾಗಿದ್ದು, ಅಧಿಕಾರಸ್ಥರ ಮಕ್ಕಳಿಗೆ ಹೀಗಾದರೆ ಇನ್ನು ಸಾಮಾನ್ಯರ ಗತಿ ಏನು, ಇಲ್ಲಿ ಯಾರು ಸುರಕ್ಷಿತವಾಗಿದ್ದಾರೆ ಎಂದು ಪ್ರಶ್ನಿಸಿದರು. ಫಯಾಜ್ ನಿಜವಾಗಿಯೂ ಪ್ರೀತಿ ಮಾಡುತ್ತಿದ್ದರೆ ಇಂತ ದುಷ್ಕೃತ್ಯಕ್ಕೆ ಕೈ ಹಾಕುತ್ತಿದ್ದನೆ, ಪ್ರೀತಿ, ಪ್ರೇಮದ ಬಲೆ ಬೀಸಿ ಹಿಂದು ಯುವತಿಯರ ದಾರಿ ತಪ್ಪಿಸುವ ಪ್ರಸಂಗಗಳು ಗಾಗ ನಡೆಯುತ್ತವೆ. ಈ ಬಗ್ಗೆ ಸಮಗ್ರವಾಗಿ ತನಿಖೆ ನಡೆಸಿ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ರಾಜ್ಯದಲ್ಲಿ ಇಂತಹ ಹತ್ಯೆಗಳು ಮರುಕಳಿಸದಂತೆ ಸರ್ಕಾರ ಎಚ್ಚರಿಕೆ ವಹಿಸಬೇಕು. ದುಷ್ಕೃತ್ಯ ಮಾಡಿದುಮರನ್ನು ಎನ್‌ಕೌಂಟರ್ ಮಾಡುವಂತಹ ಕಾನೂನು ಜಾರಿಗೊಳ್ಳಬೇಕು. ನೇಹಾ ಕೊಲೆ ಮಾಡಿದ ಆರೋಪಿಯನ್ನು ಗಲ್ಲು ಶಿಕ್ಷೆಗೆ ಒಳಪಡಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಅಖಿಲ ಭಾರತ ವಿದ್ಯಾರ್ಥಿ ಪರಿಷತ್ ಜಿಲ್ಲಾ ಸಂಚಾಲಕಿ ಸುಗುಣ, ಸುಶ್ಮಿತಾ, ಉಲ್ಲಾಸ್, ಹಿಂದೂಪರ ಸಂಘಟನೆಗಳ ಸುರೇಶ್, ವಸಂತ್‌ಕುಮಾರ್, ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಇಂದ್ರೇಶ್, ಮುಖಂಡರಾದ ಅಬ್ಬಾಸ್ ಅಲಿ ಬೋಹ್ರಾ, ಉಮೇಶ್, ಇಂಡುವಾಳು ಸಚ್ಚಿದಾನಂದ ಉಪಸ್ಥಿತರಿದ್ದರು.

ಕುಮಾರಸ್ವಾಮಿ ಗೆಲುವು ಸಾಧಿಸಿ ಸಂಸತ್ ಪ್ರವೇಶಿಸಬೇಕು

■ ಕಾಯಕಯೋಗಿ ಸುದ್ದಿ

ಪಾಂಡವಪುರ : ಕಾವೇರಿ ವಿಚಾರವಾಗಿ ತಮಿಳುನಾಡಿನವರು ಮಾಡುವ ಲಾಬಿಯನ್ನು ತಡೆಯಲು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಗೆಲುವು ಸಾಧಿಸಿ ಸಂಸತ್ ಪ್ರವೇಶಿಸಬೇಕು ಎಂದು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ತಿಳಿಸಿದರು.

ಪಟ್ಟಣದ ಹಾರೋಹಳ್ಳಿ ಸಮೀಪದ ಹೊಸಿಲು ಮಾರಮ್ಮನ ದೇವಸ್ಥಾನ ಆವರಣದಲ್ಲಿ ಬಿಜೆಪಿ ನೂತನ ಜಿಲ್ಲಾಧ್ಯಕ್ಷ ಡಾ.ಇಂದ್ರೇಶ್ ಅವರ ನಡವಳಿಕೆಯಿಂದ ಬೇಸತ್ತು ಶುಕ್ರವಾರ ಪ್ರತೇಕ ಸಭೆ ನಡೆಸಿದ ಬಿಜೆಪಿ ಹಳೆಯ ಮುಖಂಡರು ಮತ್ತು ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಪಕ್ಷದೊಳಗಿನ ಆತಂರಿಕ ವಿಚಾರಗಳು ಮತ್ತು ಸಣ್ಣ ಪುಟ್ಟ ತಪ್ಪುಗಳನ್ನು ಪಕ್ಷದ ವೇದಿಕೆಯಲ್ಲೇ ಸರಿಪಡಿಸಿಕೊಳ್ಳಿ ಎಂದು ಬಿಜೆಪಿ ಮುಖಂಡರಿಗೆ ಸಲಹೆ ನೀಡಿ ಮಾತನಾಡಿದರು. ಕೇವಲ ಶೋಕಿಗಾಗಿ ಸಂಸತ್ ಪ್ರವೇಶ ಮಾಡಿದರೆ ಪ್ರಯೋಜನವಿಲ್ಲ. ನಾನು ಈಗಾಗಲೇ ಸಂಸದನ್ನಾಗಿ ಕೆಲಸ ಮಾಡಿದ್ದು, ತಮಿಳುನಾಡಿನ ಸಂಸದರು



ಕಾವೇರಿಗಾಗಿ ಯಾವ್ಯಾವ ರೀತಿ ಲಾಬಿ ಮಾಡುತ್ತಾರೆ ಎಂಬು ದನ್ನು ಅರಿತ್ತಿದ್ದೇನೆ. ಬಹಳ ವರ್ಷ ಗಳಿಂದ ನೆನೆಗುಂದಿಗೆ ಬಿದ್ದಿರುವ ಕಾವೇರಿ ವ್ಯಾಜ್ಯ ಇತ್ಯಾರ್ಥ ಮತ್ತು ಮೇಕೆದಾಟು ಯೋಜನೆಗೆ ಅನುಮತಿಗಾಗಿ ಕುಮಾರಸ್ವಾಮಿ ಅವರು ಗೆಲ್ಲಲೇ ಬೇಕು ಎಂದು ಹೇಳಿದರು.

ಬಿಜೆಪಿ ಶಿಸ್ತಿನ ಪಕ್ಷವಾಗಿದ್ದು, ರಾಷ್ಟ್ರದ ಉತ್ತಮ ಭವಿಷ್ಯಕ್ಕೆ ನರೇಂದ್ರ ಮೋದಿ ಪ್ರಧಾನಿಯಾಗಬೇಕು ಎಂಬ ಆಶಯ ಪ್ರತಿಯೊಬ್ಬ ಕಾರ್ಯಕರ್ತರ ಮನಸ್ಸಿನಲ್ಲಿದೆ. ಮೇಲುಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಅದ್ಭುತವಾಗಿ ಕೆಲಸ ಮಾಡುತ್ತಿದ್ದಾರೆ. ಎಚ್.ಡಿ. ದೇವೇಗೌಡರ ನೇತೃತ್ವದಲ್ಲಿ ಕುಮಾರಸ್ವಾಮಿ ಅವರು ಸಂಸದರಾಗಿ ಆಯ್ಕೆಯಾಗುವುದು ನಿಶ್ಚಿತ. ಎಲ್ಲರು ಒಗ್ಗೂಡಿ ಶ್ರಮಿಸಿದರೆ ಕುಮಾರಸ್ವಾಮಿ ಅವರ ಗೆಲುವನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ. ಮೇಲುಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಕುಮಾರಸ್ವಾಮಿ ಅವರಿಗೆ ಅತ್ಯಂತ ಹೆಚ್ಚು ಬಹುಮತ ನೀಡಬೇಕು ಎಂದು ಮನವಿ ಮಾಡಿದರು.

ಈ ವೇಳೆ ಬಿಜೆಪಿ ರೈತಮೋರ್ಚಾ ಮಾಜಿ ಅಧ್ಯಕ್ಷ ಎಚ್.ಎನ್.ಮಂಜುನಾಥ್, ಜೆಡಿಎಸ್ ತಾಲೂಕು ಅಧ್ಯಕ್ಷ ಎಸ್.ಎ.ಮಲ್ಲೇಶ್, ಮುಖಂಡರಾದ ದೊರೆಸ್ವಾಮಿ, ಎನ್.ಭಾಸ್ಕರ್, ವಂದೇಸಮುದ್ರ ಸೋಮಶೇಖರ್, ಕುಮಾರನಾಯಕ, ಜಯಣ್ಣಚಾರಿ, ರಾಜಶೇಖರ್, ಬಾಲಗಂಗಾಧರ್ ಇತರರು ಇದ್ದರು.

ಮೈತ್ರಿ ಅಭ್ಯರ್ಥಿಗೆ ಮತ ನೀಡಲು ಪುಟ್ಟಸ್ವಾಮಿಗೌಡ ಮನವಿ

■ ಕಾಯಕಯೋಗಿ ಸುದ್ದಿ

ಮಂಡ್ಯ : ಎಚ್.ಡಿ.ಕುಮಾರಸ್ವಾಮಿ ಅವರು ರಾಜ್ಯದಲ್ಲಿ ಎರಡು ಬಾರಿ ಮುಖ್ಯಮಂತ್ರಿಯಾಗಿ ಹಲವು ಜನಪರ ಹಾಗೂ ರೈತರ ಪರವಾಗಿ ಯೋಜನೆ ತಂದು ಮಾದರಿ ಮುಖ್ಯಮಂತ್ರಿಯಾಗಿದ್ದಾರೆ. ಅವರು ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿಯಾಗಿ ಸ್ಪರ್ಧಿಸಿರುವುದರಿಂದ ಮತ ನೀಡಬೇಕು ಎಂದು ಜೆಡಿಎಸ್ ಮುಖಂಡ ಪುಟ್ಟಸ್ವಾಮಿಗೌಡ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೆಚ್.ಡಿ.ಕೆ ಆಡಳಿತದಲ್ಲಿ ಸಾರಾಯಿ ನಿಷೇಧ, ಲಾಟರಿ ನಿಷೇಧ, ಗ್ರಾಮ ವಾಸ್ತವ್ಯ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಅನುಷ್ಠಾನ ಮಾಡಿದ್ದ ಕೀರ್ತಿ ಇವರದ್ದು. ಸದಾ ಜನರಪ ಸಮಾಜಮುಖಿ ಚಿಂತನೆಗಳನ್ನು ಇಟ್ಟುಕೊಂಡಿರುವ ವ್ಯಕ್ತಿಯು ನಮ್ಮ ನರೇಂದರ ಮೋದಿ ಅವರಿಗೆ ಶಕ್ತಿ ತುಂಬಲಿದ್ದಾರೆ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತ ಬಂದ ಮೇಲೆ ಮಂಡ್ಯ ಜಿಲ್ಲೆಯಷ್ಟೇ ಅಲ್ಲ ಇಡೀ ರಾಜ್ಯದಲ್ಲಿಯೇ ಅಭಿವೃದ್ಧಿ ಎಂಬುದೇ ಇಲ್ಲವಾಗಿದೆ. ಕೇವಲ ಗ್ಯಾರಂಟಿಗಳಿಗೆ ಹಣ ಸಂಗ್ರಹಿಸುತ್ತಾ ನೀರಾವರಿ ಯೋಜನೆಗಳು ನೆನೆಗುದಿಗೆ ಬಿದ್ದಿರುವುದರಿಂದ ರೈತರು ಆತ್ಮಹತ್ಯೆ ಮಾಡಿಕೊಳ್ಳುವ ಸಂಖ್ಯೆ ಹೆಚ್ಚುತ್ತಿದೆ. ಇನ್ನಾದರೂ ಕಾಂಗ್ರೆಸ್ ತ್ಯಜಿಸಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿಗಳಿಗೆ ಮತ ನೀಡುವ ಮೂಲಕ ಜಯಶೀಲರನ್ನಾಗಿ ಮಾಡಬೇಕು ಎಂದು ಮನವಿ ಮಾಡಿದರು.

ಜೆಡಿಎಸ್ ಮುಖಂಡರಾದ ಅಂಬುಜಮ್ಮ ಮಾತನಾಡಿ, ನಮ್ಮ ಜಿಲ್ಲೆಯಲ್ಲಿ ಒಂದೂ ಬೆಳೆಯನ್ನು ಬೆಳೆಯಲು ಸಾಧ್ಯವಾಗಿಲ್ಲ ಹಾಗಾಗಿ ಮೂರು ವರ್ಷ ರೈತರ ಆರ್ಥಿಕತೆ ಹಿಂದಕ್ಕೆ ಹೋಗಿದ್ದು, ಈ ನಷ್ಟವನ್ನು ತುಂಬಿಕೊಡಬೇಕು ಎಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ಮುಖಂಡರಾದ ರಾಮಣ್ಣ, ನಾಗಲಿಂಗಯ್ಯ ಬಿದರಕೋಟೆ ಇದ್ದರು.

ಕಾವೇರಿ ಗೆಳತಿಯರ ಬಳಗದಿಂದ ಎಸ್.ಬಿ.ಶಿವಕುಮಾರ್‌ಗೆ ಸನ್ಮಾನ

■ ಕಾಯಕಯೋಗಿ ಸುದ್ದಿ

ಮಂಡ್ಯ : ತಾಲೂಕು ಹೊಳಲು ಗ್ರಾಮದ ಕಾವೇರಿ ಗೆಳತಿಯರ ಬಳಗದ ವತಿಯಿಂದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ವಲಯ ಮೇಲ್ವಿಚಾರಕ ಎಸ್.ಬಿ.ಶಿವಕುಮಾರ್ ಅವರನ್ನು ಮಹಿಳಾ ಮಂಡಳಿ ಕಚೇರಿಯಲ್ಲಿ ಸನ್ಮಾನಿಸಿ ಅಭಿನಂದಿಸಿ ಬೀಳ್ಕೊಟ್ಟರು.

ಕಾವೇರಿ ಗೆಳತಿಯರ ಬಳಗದ ಅಧ್ಯಕ್ಷೆ ಲಿಂಗರಾಜಮ್ಮ ಮಾತನಾಡಿ, ನಮ್ಮ ಗ್ರಾಮಕ್ಕೆ ಬಂದು ಸುಮಾರು ಐದು ವರ್ಷಗಳಾಗಿದೆ. ಗ್ರಾಮಕ್ಕೆ ಒಳ್ಳೆಯ ಕೆಲಸಗಳನ್ನು ಮಾಡಿದ್ದಾರೆ. ಹಾಗೂ ಗ್ರಾಮದ ದೇವಸ್ಥಾನಗಳು, ಸಮುದಾಯ ಭವನ ನಿರ್ಮಾಣ, ಶೌಚಾಲಯಗಳು, ಸಂಘ–ಸಂಸ್ಥೆಗಳಿಗೆ ಆರ್ಥಿಕ ಸಹಾಯಧನವನ್ನು ಶ್ರೀ ಕ್ಷೇತ್ರದಿಂದ ಸಹಾಯ ಮಾಡಿಸಿದ್ದಾರೆ ಎಂದು ಹೇಳಿದರು

ಸನ್ಮಾನ ಸ್ವೀಕರಿಸಿ ಮಾತನಾಡಿದ ಎಸ್.ಬಿ.ಶಿವಕುಮಾರ್, ಈ ಗ್ರಾಮಕ್ಕೆ ಬಂದು ಸುಮಾರು ಐದು ವರ್ಷಗಳಾಗಿದೆ ಇಲ್ಲಿನ ಜನರು ಒಳ್ಳೆಯ ಪ್ರೀತಿಯಿಂದ ನೋಡಿದ್ದಾರೆ ಹಾಗೂ ಶ್ರೀ ಕ್ಷೇತ್ರ



ಧರ್ಮಸ್ಥಳದ ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಮಂಡ್ಯಕ್ಕೆ ಬಂದು ಹೊಳಲು ವಲಯದ 13 ಹಳ್ಳಿಗಳಲ್ಲಿ ಸಂಘ ಸಂಸ್ಥೆಗಳಲ್ಲಿ ವಲಯ ಮೇಲ್ವಿಚಾರಕನಾಗಿ ಒಳ್ಳೆಯ ಕೆಲಸಗಳನ್ನು ಮಾಡಿರುವ ತೃಪ್ತಿ ನನಗಿದೆ. ಆದರೂ ಸಹ ಇಲ್ಲಿನ ಜನರು ಹಾಗೂ ಮಾಜಿ ಶಾಸಕರಾದ ಎಚ್.ಬಿ.ರಾಮು, ಎಚ್.ಎಲ್.ಶಿವಣ್ಣನವರು ಹಾಗೂ ಗ್ರಾಮದ ಮುಖಂಡರು ತೋರಿಸುವ ಪ್ರೀತಿ ಅಪಾರವಾದದ್ದು. ಬಹಳ ಸಂತೋಷ ತಂದಿದೆ. ಆದ್ದರಿಂದ ಮಂಡ್ಯ ಜಿಲ್ಲೆಯ ಜನರು ಕಬ್ಬಿನಷ್ಟೇ ಸಿಹಿ ಎಂದು ಹಾಗೂ ಪ್ರತಿಯೊಂದು ಹಳ್ಳಿಗಳು ಒಳ್ಳೆಯ ಪ್ರೀತಿ ವಿಶ್ವಾಸದಿಂದ ನೋಡಿ ಕೆಲಸಗಳನ್ನು ಮಾಡಿಸುತ್ತಾರೆ. ಆ ಭಗವಂತನು ಹಾಗೂ ಶ್ರೀ ಕ್ಷೇತ್ರದ ಮಂಜುನಾಥಸ್ವಾಮಿಯು ನಿಮಗೆಲ್ಲರಿಗೂ ಒಳ್ಳೆಯದು ಮಾಡಲಿ ಎಂದು ಈ ಸಂದರ್ಭದಲ್ಲಿ ಹೇಳಿದರು.

ಈ ಸಂದರ್ಭದಲ್ಲಿ ಕಾವೇರಿ ಗೆಳತಿಯರ ಬಳಗದ ಸದಸ್ಯರಾದ ಭಾಗ್ಯ, ಅನುಸೂಯ, ಭಾಗ್ಯ, ಸುಕನ್ಯ, ಪದ್ಮ, ಚಿಕ್ಕತಾಯಮ್ಮ, ಹಾಗೂ ಜಿಲ್ಲಾ ಜನಜಾಗೃತಿ ಸದಸ್ಯರಾದ ಶಂಕರ್ ಪೂಜಾರಿ, ಗ್ರಾಮದ ಮುಖಂಡ ತಮ್ಮಣ್ಣ ಹಾಗೂ ಮಹಿಳಾ ಮಂಡಳಿಯ ಸದಸ್ಯರು ಹಾಜರಿದ್ದು ಶಿವಕುಮಾರ್ ಅವರನ್ನು ಬೀಳ್ಕೊಟ್ಟರು.

ಗಜೇಂದ್ರಮೋಕ್ಷ ಕೊಳ ಅಭಿವೃದ್ಧಿಪಡಿಸಿ ಪೂಜೆ

ಮಂಡ್ಯ : ಜಿಲ್ಲಾಡಳಿತ, ನಗರಸಭೆ ಹಾಗೂ ಇತರೆ ಸಂಘ ಸಂಸ್ಥೆಗಳ ಸಹಕಾರದಿಂದ ನಗರದ ಈಶಾನ್ಯ ಮೂಲೆಯಲ್ಲಿರುವ ಗಜೇಂದ್ರಮೋಕ್ಷ ಕೊಳ ಅಭಿವೃದ್ಧಿಪಡಿಸಿ ಪೂಜೆ ಸಲ್ಲಿಸಲಾಯಿತು.

ಎಸ್.ಎಸ್.ಕೆ. ಸೇವಾ ಟ್ರಸ್ಟ್‌ನ ಅಧ್ಯಕ್ಷ ಎಂ.ಬಿ. ರಮೇಶ್ ಮಾತನಾಡಿ, ಗಜೇಂದ್ರ ಮೋಕ್ಷ ಕಲ್ಯಾಣಿ ಮುಚ್ಚಿಹೋಗಿತ್ತು. ಕೆಲವು ವರ್ಷಗಳ ಹಿಂದೆ ಇದನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ ಕಾರ್ಯೋನ್ಮುಖವಾಗಿತ್ತು. ಪ್ರತೀ ವರ್ಷವೂ ಶ್ರೀ ಲಕ್ಷ್ಮಿಜನಾರ್ದನಸ್ವಾಮಿ ಉತ್ಸವಮೂರ್ತಿ ಇಲ್ಲಿಗೆ ಬಂದು ಪೂಜೆ ಸಲ್ಲಿಸಿ ಹೋಗುವುದು ವಾಡಿಕೆ. ಈ ಬಾರಿಯೂ ಉತ್ಸವ ಇಲ್ಲಿಗೆ ಬಂದು ಪೂಜಾ ಕಾರ್ಯಗಳನ್ನು ನೆರವೇರಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕೊಳವನ್ನು ಅಭಿವೃದ್ಧಿಪಡಿಸಲು ನಿರ್ಧರಿಸಲಾಯಿತು ಎಂದು ಹೇಳಿದರು.

ಭಗವಾನ್ ಶ್ರೀ ವಿಷ್ಣುವಿನ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿದೆ. ಮುಂದಿನ ದಿನಗಳಲ್ಲಿ ಶ್ರೀ ಮಹಾಲಕ್ಷ್ಮಿ ಮೂರ್ತಿಯನ್ನು ಪ್ರತಿಷ್ಠಾಪಿಸಲು ನಿರ್ಧರಿಸಲಾಗಿದ್ದು, ಇದಕ್ಕೆ ಸಾರ್ವಜನಿಕರು, ಸಂಘ ಸಂಸ್ಥೆಗಳು, ಭಕ್ತರು ಸಹಕಾರ ನೀಡಬೇಕು ಎಂದು ಕೋರಿದರು.

ಜಿಲ್ಲಾಡಳಿತ, ನಗರಸಭೆ ಸೇರಿದಂತೆ ಹಲವಾರು ಸಂಘ –ಸಂಸ್ಥೆಗಳ ಸಹಕಾರದಿಂದ ಈಗಾಗಲೇ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-3

21-04-2024

ಮೈಸೂರು

ಹಳೇಪುರ ಗ್ರಾಮದಲ್ಲಿ ನಾಯಿಗಳ ದಾಳಿಗೆ ಕುರಿಗಳ ಬಲಿ

■ ಕಾಯಕಯೋಗಿ ಸುದ್ದಿ

ನಂಜನಗೂಡು: ನಾಯಿಗಳ ದಾಳಿಗೆ ಕುರಿಗಳು ಬಲಿಯಾಗಿರುವ ಘಟನೆ ನಂಜನಗೂಡು ತಾಲ್ಲೂಕಿನ ಹಳೇಪುರ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಲಕ್ಷ್ಮಿ ಎಂಬುವರಿಗೆ ಸೇರಿದ ಕುರಿಗಳಾಗಿದ್ದು, ಇಂದು ಕುರಿಗಳನ್ನು ಮೇಯಿಸುತ್ತಿದ್ದ ವೇಳೆ ಬೀದಿ ನಾಯಿಗಳು ಏಕಾಏಕಿ ನಾಲ್ಕು ಕುರಿಗಳ ಮೇಲೆ ದಾಳಿ ನಡೆಸಿ ಅರೆ ಬರೆ ತಿಂದು ಬಿಸಾಡಿ ಹೋಗಿವೆ. ಕುರಿಗಳನ್ನು ನಂಬಿಕೊಂಡು ಜೀವನ ಸಾಗಿಸುತ್ತಿದ್ದು, ಗ್ರಾಮದಲ್ಲಿ ನಾಯಿಗಳ ಹಾವಳಿ ಹೆಚ್ಚಾಗಿದೆ ಇದರಿಂದ ಸಾಕು ಪ್ರಾಣಿಗಳ ಮೇಲೆ ನಾಯಿಗಳು ನಿರಂತರವಾಗಿ ದಾಳಿ ನಡೆಸಿ ಬಲಿಪಡೆದುಕೊಳ್ಳುತ್ತಿವೆ. ಸುಮಾರು ಒಂದು ಲಕ್ಷಕ್ಕೂ ಹೆಚ್ಚು ಬೆಲೆ ಬಾಳುವ ಕುರಿಗಳಾಗಿದ್ದು ತುಂಬಲಾರದ ನಷ್ಟ ಉಂಟಾಗಿದೆ. ನೇರಳೆ ಗ್ರಾಮ ಪಂಚಾಯಿತಿ ಆಡಳಿತ ಕೂಡಲೇ ನಾಯಿಗಳನ್ನು ಹಿಡಿಸಬೇಕು. ಕುರಿಗಳನ್ನು ಕಳೆದುಕೊಂಡ ರೈತ ಮಹಿಳೆಗೆ ಸೂಕ್ತ ಪರಿಹಾರವನ್ನು ನೀಡಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.



ಚುನಾವಣೆಯಲ್ಲಿ ಹೆಚ್ಚು ಮತ ನೀಡಿ ನನ್ನನ್ನು ಆಯ್ಕೆ ಮಾಡಲು ಲಕ್ಷ್ಮಣ್ ಮನವಿ

■ ಕಾಯಕಯೋಗಿ ಸುದ್ದಿ



ಪಿರಿಯಾಪಟ್ಟಣ :- ಹಲವಾರು ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ದುಡಿದುಕೊಂಡು ಪಕ್ಷಕ್ಕಾಗಿ ಹಾಗೂ ಹೋರಾಟಗಳನ್ನು ಮಾಡುವ ಮೂಲಕ ಪಕ್ಷ ಸಂಘಟಿಸಿದ್ದೇನೆ ಇತ್ತೀಚಿಗೆ ಎರಡು ಚುನಾವಣೆಗಳಲ್ಲಿ ಸೋತಿದ್ದು ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ನನ್ನನ್ನು ಗುರುತಿಸಿ ಟಿಕೆಟ್ ನೀಡಿದ್ದು ಈ ಬಾರಿ ಕಾಂಗ್ರೆಸ್ ಪಕ್ಷದ ಗುರುತಿಗೆ ಮತವನ್ನು ಕೊಡುವ ಮೂಲಕ ನನ್ನನ್ನು ಗೆಲ್ಲಿಸಬೇಕೆಂದು ಕಾಂಗ್ರೆಸ್ ಅಭ್ಯರ್ಥಿ ಎಂ ಲಕ್ಷ್ಮಣ್. ಮನವಿ ಮಾಡಿದರು.

ತಾಲೂಕಿನ ನವಿಲೂರು ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿ ಮತಯಾಚನೆ ಮಾಡಿದರು. ಬಿಜೆಪಿ ಸರ್ಕಾರ ಬಡವರಿಗೆ ಯಾವುದೇ ಯೋಜನೆ ಜಾರಿ ಮಾಡಿಲ್ಲ ಕೇವಲ ಬರಿ ಸುಳ್ಳು ಭರವಸೆ ನೀಡಿ ಜನರ ದಾರಿ ತಪ್ಪಿಸುವ ಕೆಲಸ ಮಾಡುತ್ತಿದೆ ಈ ಬಾರಿ ಮೈಸೂರು ಕೊಡಗು ಲೋಕಸಭಾ ಚುನಾವಣೆಯಲ್ಲಿ ನನಗೆ ಹೆಚ್ಚು ಮತ ನೀಡುವ ಮೂಲಕ ನನ್ನನ್ನು ಆಯ್ಕೆ ಮಾಡಿ ನಿಮ್ಮ ಯಾವುದೇ ಸಮಸ್ಯೆ ಬರದ ಹಾಗೆ ಮತ್ತು ಅಭಿವೃದ್ಧಿ ಮಾಡುವ ಸಲುವಾಗಿ ನನ್ನನ್ನು ಗೆಲ್ಲಿಸಬೇಕು ಎಂದರು.

ಪಶುಸಂಗೋಪನೆ ಮತ್ತು ರೇಷ್ಮೆ ಕತೆ ಸಚಿವ ಕೆ ವೆಂಕಟೇಶ್ ಮಾತಾಡಿ ಕಾಂಗ್ರೆಸ್ ಸರ್ಕಾರ ರಾಜ್ಯದ ಜನರಿಗೆ ಐದು ಭರವಸೆ ನೀಡುವ ಮೂಲಕ ಕೊಟ್ಟ ಮಾತನ್ನು ಉಳಿಸಿಕೊಂಡಿದೆ ಅದೇ ರೀತಿ ಎಲ್ಲಾ ಜನಸಾಮಾನ್ಯರಿಗೆ ನೆರವಾಗಿದ್ದೇವೆ ಅದರ ಜೊತೆಗೆ ಅಭಿವೃದ್ಧಿ ಕೆಲಸವನ್ನು ಮಾಡುತ್ತಿದ್ದೇವೆ ನಾವು ಮಾಡಿದ ಕೆಲಸಕ್ಕೆ ನೀವು ಕೂಲಿಯಾಗಿ ಮತ ಹಾಕುವ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಬಹುಮತವನ್ನು ನೀಡುವ ಮೂಲಕ ನಮ್ಮ ಅಭ್ಯರ್ಥಿ ಲಕ್ಷ್ಮಣ ಅವರನ್ನು ಗೆಲ್ಲಿಸಬೇಕು ಎಂದರು . ಬರಿಗೈಯಿಂದ ಬಂದ ಬಿಜೆಪಿಯವರಿಗೆ ಮತ ಕೊಡಬೇಡಿ ಬಿಜೆಪಿಯವರ ಸುಳ್ಳು ಮಾತಿಗೆ ಯಾರು ಮಾರುಹೋಗದೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಡವರಿಗೆ ಪ್ರತಿಯೊಂದು ಜಾತಿ ಧರ್ಮಕ್ಕೂ ಸರಿ ಸಮಾನವಾಗಿ 5 ಗ್ಯಾರಂಟಿಗಳನ್ನು ನೀಡುವ ಮೂಲಕ ಎಲ್ಲರಿಗೂ ಅನುಕೂಲ ಆಗುತಿದೆ ಅದೇ ರೀತಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ರೈತರ ಸಾಲ ಮನ್ನಾ ಮಹಿಳೆಯರಿಗೆ ಒಂದು ವರ್ಷಕ್ಕೆ ಒಂದು ಲಕ್ಷ ಹೀಗೆ ಅನೇಕ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗುತ್ತದೆ . ಅಪ್ರೆಂಟಿಸ್ ತರಬೇತಿ ನೀಡಿ ಎಂಟುವರೆ ಸಾವಿರ. ನಿರುದ್ಯೋಗಿಗಳಿಗೆ ಕೊಡುವ ಮೂಲಕ ರೈತರ ಸಾಲವನ್ನು ಸಹ ಸಂಪೂರ್ಣವಾಗಿ ಮನ್ನಾ ಮಾಡುವುದಾಗಿ ಕಾಂಗ್ರೆಸ್ 5 ಗ್ಯಾರಂಟಿಗಳನ್ನು ಘೋಷಣೆ ಮಾಡಿಕೊಂಡಿದೆ ರಾಜ್ಯ ಸರ್ಕಾರ ಅನುಷ್ಠಾನಕ್ಕೆ ತಂದಂತೆ. ಕೇಂದ್ರದಲ್ಲಿ ಐದು ಗ್ಯಾರಂಟಿಗಳನ್ನು ಈಡೇರಿಸಲಾಗುವುದು. ಆದುದರಿಂದ ಸಂವಿಧಾನ ಉಳಿಸುವ ಕೆಲಸವನ್ನು ಪ್ರತಿಯೊಬ್ಬರು ಮಾಡುವಂತೆ ಕರೆ ನೀಡಿದರು. ಈ ಸಂದರ್ಭ ಆಲನಹಳ್ಳಿ ಅಂಬೇಡ್ಕರ್ ಕಾಲೋನಿಯ ಸುಮಾರು 20ಕ್ಕೂ ಹೆಚ್ಚು ಜೆಡಿಎಸ್ ಕಾರ್ಯಕರ್ತರು ಜೆಡಿಎಸ್ ಪಕ್ಷ ತೊರೆದು ಕಾಂಗ್ರೆಸ್ ಪಕ್ಷ ಸೇರ್ಪಡೆಗೊಂಡರು.

ಈ ಸಂದರ್ಭ ಆಶ್ರಯ ಕಮಿಟಿ ಅಧ್ಯಕ್ಷ ನಿತಿನ್ ವೆಂಕಟೇಶ್ ಬೆಟ್ಟದಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರೆಹಮತ್ ಜಾನ್ ಬಾಬು. ತಾಲೂಕು ಅಧ್ಯಕ್ಷ ಡಿಟಿ ಸ್ವಾಮಿ. ಖಜಾಂಚಿ ಬಸವರಾಜ್. ವಿಜಿ ಕೊಪ್ಪಲು ಲೋಕೇಶ್. ನವಿಲೂರು ಗ್ರಾಮ ಪಂಚಾಯಿತಿ ಅಧ್ಯಕ್ಷಣಿ ಸರೋಜಾ ಪ್ರಕಾಶ್ ಸದಸ್ಯ ಮಾದೇವ್. ಬಸವರಾಜ್, ಮುಖಂಡರಾದ ನಿಂಗರಾಜೇಗೌಡ ,ಸ್ವಾಮಿಗೌಡ ಶೇಕರ್, ಗುತ್ತಿಗೆದಾರ ಚೆನ್ನಪ್ಪ ಆಲನಹಳ್ಳಿ ಬಸವರಾಜ್, ಸ್ವಾಮಿ, ಈರಣ್ಣ ,ಹರೀಶ್, ಚಂದ್ರಶೇಖರ್, ನಾಗ ,ರಾಜಯ್ಯ, ದೊಡ್ಡಯ್ಯ, ಸೋಮಶೇಖರ್ ,ರಮೇಶ, ಸ್ವಾಮಿ, ಮತ್ತಿತರರು ಹಾಜರಿದ್ದರು.

ಇಂದು ಚಿಣ್ಣರಮೇಳದ ಮಕ್ಕಳಿಗೆ ಅಗ್ನಿಶಾಮಕದ ಪ್ರಾತ್ಯಕ್ಷಿಕೆ

ಮೈಸೂರು: ರಂಗಾಯಣವು ಚಿಣ್ಣರಮೇಳ-2024 ರ ಮಕ್ಕಳ ರಂಗ ತರಬೇತಿ ಶಿಬಿರವನ್ನು ಏ.12 ರಿಂದ ನಡೆಸುತ್ತಿದ್ದು, ಈ ಮೇಳದಲ್ಲಿ ಏ.20 ರಂದು ಮಧ್ಯಾಹ್ನ 4.30 ಗಂಟೆಗೆ ಅಗ್ನಿಶಾಮಕ ದಳದವರು ಚಿಣ್ಣರಮೇಳದ ಮಕ್ಕಳಿಗೆ ಅಗ್ನಿಶಾಮಕದ ಬಗ್ಗೆ ಮಾಹಿತಿ ಹಾಗೂ ಪ್ರಾತ್ಯಕ್ಷಿಕೆಯನ್ನು ನೀಡಲಿದ್ದಾರೆ ಎಂದು ರಂಗಾಯಣದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏ.26 ರಂದು ಮಹಾವೀರ ಜಯಂತಿ ಆಚರಣೆ

ಮೈಸೂರು: ಲೋಕಸಭೆ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಏ.21 ರಂದು ಭಗವಾನ್ ಮಹಾವೀರ ಜಯಂತಿಯನ್ನು ಕರ್ನಾಟಕ ಕಲಾಮಂದಿರದ ಆವರಣದಲ್ಲಿರುವ ಸುಚಿತ್ರ ಗ್ಯಾಲರಿಯಲ್ಲಿ ಬೆಳಿಗೆ 10.30 ಗಂಟೆಗೆ ಸರಳ ಹಾಗೂ ಸಾಂಕೇತಿಕವಾಗಿ ಆಚರಣೆ ಮಾಡಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಂ.ಡಿ. ಸುದರ್ಶನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಾಕನಪುರ ಗ್ರಾಮದಲ್ಲಿ ಬಿರುಗಾಳಿಗೆ ನೆಲಕಚ್ಚಿದ ಬಾಳೆ; ರೈತ ಕಂಗಾಲು



■ ಕಾಯಕಯೋಗಿ ಸುದ್ದಿ

ನಂಜನಗೂಡು: ಬಿರುಗಾಳಿಗೆ ಸಿಲುಕಿದ ಬಾಳೆ ಬೆಳೆ, ಸಂಪೂರ್ಣವಾಗಿ ನೆಲಕಚ್ಚಿರುವ ಘಟನೆ ನಂಜನಗೂಡು ತಾಲ್ಲೂಕಿನ ಮಾಕನಪುರ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಾಗರಾಜು ಎಂಬುವವರು ತಮ್ಮ ಎರಡು ಎಕರೆ ಪ್ರದೇಶದಲ್ಲಿ ಬಾಳೆ ಬೆಳೆಯನ್ನು ಬೆಳೆದಿದ್ದರು. ಇನ್ನೇನು ಬಾಳೆ ಬೆಳೆ ಕೈಗೆ ಬರುವಷ್ಟರಲ್ಲಿ ಬಿರುಗಾಳಿಗೆ ಸಿಲುಕಿ ನಾಶವಾಗಿದೆ. ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ.

ಸುಮಾರು 5 ಲಕ್ಷಕ್ಕೂ ಹೆಚ್ಚು ಹಣವನ್ನು ಖರ್ಚು ಮಾಡಿ ಸಾಲ ಮಾಡಿಕೊಂಡು ಬೆಳೆಯನ್ನು ಬೆಳೆದಿದ್ದೆವು. ಆದರೆ, ಬಿರುಗಾಳಿಗೆ ಸಿಲುಕಿ ಬೆಳೆ ನಾಶವಾಗಿದೆ. ಇದರಿಂದ ರೈತರು ಜೀವನ ಸಾಗಿಸುವುದಾದರೂ ಹೇಗೆ. ಬೇಸಿಗೆಯ ಸಮಯದಲ್ಲಿ ಕೃಷಿ ಚಟುವಟಿಕೆ ನಡೆಸಲು ನೀರಿನ ವ್ಯವಸ್ಥೆ ಇಲ್ಲ, ಒಂದೆಡೆ ಕಾಡುಪ್ರಾಣಿಗಳ ಹಾವಳಿ ಇಂತಹ ಸಂದರ್ಭದಲ್ಲಿ ನಾವು ಹಗಲು ರಾತ್ರಿ ಎನ್ನದೆ ಕಷ್ಟಪಟ್ಟು ಬೆಳೆಯನ್ನು ಬೆಳೆದಿದ್ದೆವು. ಈ ರೀತಿಯಾದರೆ ರೈತರು ನಾವು ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಳ್ಳಬೇಕಾಗುತ್ತದೆ. ಕೂಡಲೇ ಸರ್ಕಾರಗಳು ನಮಗೆ ಸೂಕ್ತ ಪರಿಹಾರವನ್ನು ನೀಡಬೇಕು ಎಂದು ರೈತ ಸಿದ್ದರಾಜು ತಮ್ಮ ಅಳಲನ್ನು ತೋಡಿಕೊಂಡಿದ್ದಾರೆ.

ಶ್ರೀನಂಜುಂಡನ ಸನ್ನಿಧಿಯಲ್ಲಿ ಭಕ್ತರಿಗೆ ಮತದಾನ ಅರಿವು



■ ಕಾಯಕಯೋಗಿ ಸುದ್ದಿ

ನಂಜನಗೂಡು: ದಕ್ಷಿಣ ಕಾಶಿ ನಂಜನಗೂಡಿನ ಶ್ರೀ ನಂಜುಂಡೇಶ್ವರಸ್ವಾಮಿ ದೇವಸ್ಥಾನದ ಮುಂಭಾಗ ಬೃಹತ್ ರಂಗೋಲಿ ಬಿಡಿಸಿ ಸುತ್ತಲೂ ಮಣ್ಣಿನ ಹಣತೆ, ಕ್ಯಾಂಡಲ್ ಬೆಳಗುವ ಮೂಲಕ ನಂಜನಗೂಡು ತಾಲ್ಲೂಕು ಪಂಚಾಯಿತಿ ಸ್ವೀಪ್ ಸಮಿತಿಯು ಅಪಾರ ಭಕ್ತರಿಗೆ ಮತದಾನ ಜಾಗೃತಿ ಮೂಡಿಸಿದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಎನ್ ಆರ್ ಎಲ್ ಎಂ ಸಂಘದ ಮಹಿಳೆಯರು ದೇಗುಲದ ಮುಂಭಾಗ ರಂಗೋಲಿಯಲ್ಲಿ ಬಿಡಿಸಿದ್ದ ಇ.ವಿ.ಎಂ ಯಂತ್ರ, ತೋರು ಬೆರಳಿಗೆ ಶಾಹಿ ಗುರುತು, ಮತದಾನ ಕುರಿತ ಘೋಷವಾಕ್ಯಗಳು ನೆರದಿದ್ದ ಭಕ್ತರ ಗಮನ ಸೆಳೆಯಿತು. ರಂಗೋಲಿ ಸುತ್ತಲೂ ಮಣ್ಣಿನ ಹಣತೆ, ಕ್ಯಾಂಡಲ್ ಬೆಳಗಿಸಿ ಮಾತನಾಡಿದ ಜಿಲ್ಲಾ ಪಂಚಾಯತ್ ಜಗನಾಥ್ ಮೂರ್ತಿ, ಸದೃಢ ಸಮಾಜ ನಿರ್ಮಿಸಲು ಪ್ರತಿಯೊಬ್ಬರ ಮತವು ಅತ್ಯಗತ್ಯ. ಸಂವಿಧಾನಿಕ ಮತದಾನದ ಹಕ್ಕನ್ನು ಯಾರೊಬ್ಬ ಅರ್ಹರು ಬಿಟ್ಟುಕೊಡಬಾರದು. ಏಪ್ರಿಲ್ 26 ರಂದು ನಿಮ್ಮ ನಿಮ್ಮ ಮತಗಟ್ಟೆಗಳತ್ತ ಹೆಜ್ಜೆ ಹಾಕಿ ಎಂದರು. ಬಳಿಕ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ ಮಾತನಾಡಿ, ಈ ಚುನಾವಣೆಯು ಒಂದು ಹಬ್ಬವಿದ್ದಂತೆ, ಪ್ರತಿಯೊಬ್ಬರು ಹಕ್ಕು ಚಲಾಯಿಸಲು ಉತ್ಸುಕತೆ ತೋರಬೇಕು. ಮತಹಾಕುವ ಮೂಲಕ ಹಬ್ಬ ಆಚರಿಸಬೇಕು ಎಂದು ಕರೆ ನೀಡಿದರು. ಬಳಿಕ ವಿವಿಧೆಡೆಯಿಂದ ಆಗಮಿಸಿದ್ದ ಭಕ್ತರಿಗೆ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ನರೇಗಾ ಸಹಾಯಕರಾದ ಶಿವಕುಮಾರ್, ಕಾವ್ಯ, ತಾಲ್ಲೂಕು ಸ್ವೀಪ್ ಸಮಿತಿ ಸದಸ್ಯರು, ಎನ್.ಆರ್.ಎಲ್.ಎಂ. ಸಿಬ್ಬಂದಿ ಹಾಜರಿದ್ದರು.

ಶ್ರೇಷ್ಠ ಭಾರತ ನಿರ್ಮಾಣಕ್ಕಾಗಿ ಬಿಜೆಪಿಗೆ ಮತ ನೀಡಿ: ಯಧುವೀರ್

■ ಕಾಯಕಯೋಗಿ ಸುದ್ದಿ




ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಯಧುವೀರ್ ಒಡೆಯರ್ ರವರು ಇಂದು ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಭರ್ಜರಿ ಮತ ಪ್ರಚಾರ ನೆಡೆಸಿದರು.

ಈ ವೇಳೆ ಜಟ್ಟಿಹುಂಡಿ ಗ್ರಾಮದಲ್ಲಿ ಮಾತನಾಡಿದ ಅವರು ಪ್ರದಾನಿ ನರೇಂದ್ರ ಮೋದಿಯವರು ಕಳೆದ 10 ವರ್ಷದಲ್ಲಿ ಮೈಸೂರು ಕೊಡಗು ಕ್ಷೇತ್ರಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಮೈಸೂರು ಬೆಂಗಳೂರು ರಾಷ್ಟ್ರೀಯ ಹೆದ್ದಾರಿ , ಜಲಜೀವನ್ ಮಿಷನ್ ಮೂಲಕ ಎರಡುವರೆ ಲಕ್ಷ ಮನೆಗಳಿಗೆ ಕುಡಿಯುವ ನೀರು ಪೂರೈಕೆ , ಪ್ರಧಾನ ಮಂತ್ರಿ ಅವಾಜ್ ಯೋಜನೆಯ ಮೂಲಕ ಆಶ್ರಯ ಮನೆಗಳು, 41 ಜನ ಔಷಧಿ ಕೆಂದ್ರದ ಮೂಲಕ ಅತ್ಯಂತ ಕಡಿಮೆ ಬೆಲೆಗೆ ಗುಣಮಟ್ಟದ ಔಷಧಿ ಪೂರೈಕೆ ,ವಂದೇಭಾರತ್ ರೈಲುಗಳ ದೇಶದ ವಿವಿದೆಡೆಗೆ ಸಂಪರ್ಕ, ಹೀಗೆ ಹಲವಾರು ಯೋಜನೆಗಳನ್ನು ಮೈಸೂರು ಕೊಡಗು ಕ್ಷೇತ್ರಕ್ಕೆ ಕೊಟ್ಟಿದ್ದಾರೆ ಈ ಕ್ಷೇತ್ರದಲ್ಲಿ ಮೈತ್ರಿ ಅಭ್ಯರ್ಥಿಯನ್ನು ಗೆಲ್ಲಿಸುವುದರೊ ಂದಿಗೆ ಬರುವ ಚುನಾವಣೆಯಲ್ಲಿ ಮತ್ತೆ ನಾವು ಮೋದಿಯವರ ಕೈ ಬಲಪಡಿಸಬೇಕಿದೆ ಶ್ರೇಷ್ಠ ಭಾರತದ ನಿರ್ಮಾಣಕ್ಕಾಗಿ ಬಿಜೆಪಿಗೆ ಮತನೀಡಿ ಎಂದು ಮನವಿ ಮಾಡಿದರು. ನಮ್ಮ ಪೂರ್ವಜರಂತೆ ಜನರ ನಡುಗೆ ಇದ್ದು ಕೆಲಸ ಮಾಡುತ್ತೇನೆ. ಚುನಾವಣಾ ಪ್ರಚಾರದ ವೇಳೆ ಕಾಂಗ್ರೆಸ್ಸಿಗರು ಮೈತ್ರಿ ಅಭ್ಯರ್ಥಿ ಯಧುವೀರ್ ರವರ ವಿರುದ್ಧ ಮಹರಾಜರಾಗಿ ಅರಮನೆಯೊಗಳೆ ಇರುವವರು ಜನರ ಮಧ್ಯೆ ಬಂದು ಸಮಸ್ಯೆ ಬಗೆಹರಿಸುತ್ತಾರಾ ಜನಸಾಮಾನ್ಯರು ಅವರನ್ನು ಭೇಟಿ ಮಾಡಲು ಆಗುತ್ತಾ ಎಂಬ ಅಪಪ್ರಚಾರ ನೆಡೆಸುತ್ತಿದ್ದು ಈಎಲ್ಲಾ ಅಪಪ್ರಚಾರಗಳಿಗೂ ಯಧುವೀರ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ. ನಮ್ಮ ಪೂರ್ವಜರು ಅರಮನೆಯಲ್ಲಿ ಹುಟ್ಟಿದ್ದರೂ ಜನ ಸಾಮನ್ಯರ ನಡುವೆ ಇದ್ದು ನೆರವಾಗುತ್ತಿದ್ದರು ನಾವ್ರ ಅಮರಂತೆ ನಿಮ್ಮ ನಡುವೆ ಇದ್ದು ನಿಮ್ಮ ಸೇವೆ ಮಾಡುತ್ತೇನೆ ನಿಮ್ಮಗಳ ಸೇವೆ ಮಾಡುವುದು ನನ್ನ ಪಾಲಿನ ಸೌಭಾಗ್ಯವೆಂದು ಭಾವಿಸಿದ್ದೇನೆ ಯಾವುದೆ ಅಪಪ್ರಚಾರಗಳಿಗೆ ಕಿವಿಕೊಡದೆ ನನ್ನನ್ನು ಬೆಂಬಲಿಸಿ ಎಂದು ಮತದಾರರಿಗೆ ಅಭಯ ನೀಡಿದರು.

ಈ ವೇಳೆ ಮಾಜಿ ಸಚಿವ ಹಾಗೂ ಶಾಸಕ ಜಿ.ಟಿ ದೇವೆಗೌಡ, ಬಿಜೆಪಿ ಯುವ ಮುಖಂಡ ಕವೀಶ್ ಗೌಡ ಸೇರಿದಂತೆ ಹಲವು ಗಣ್ಯರು ಹಾಜರಿದ್ದರು.

ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿ ಮಾಡಲು ಬಿಜೆಪಿ ಬೆಂಬಲಿಸಿ

■ ಕಾಯಕಯೋಗಿ ಸುದ್ದಿ



ನಂಜನಗೂಡು: ನರೇಂದ್ರ ಮೋದಿಯವರನ್ನು ಮತ್ತೆ ಪ್ರಧಾನಿ ಮಾಡಲು ಕ್ಷೇತ್ರದ ಮತದಾರರು ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಅವರನ್ನು ಬೆಂಬಲಿಸಿ ಎಂದು ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ ಹೇಳಿದರು.

ನಂಜನಗೂಡು ವಿಧಾನ ಸಭಾ ಕ್ಷೇತ್ರದ ಹುಲ್ಲಹಳ್ಳಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಬಿಜೆಪಿ ಅಭ್ಯರ್ಥಿ ಎಸ್.ಬಾಲ ರಾಜ್ ಪರ ಮತಯಾಚನೆ ಮಾಡಿ ಮಾತನಾಡಿದ ಅವರು, ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಅವರು ಒಬ್ಬ ಸಾಮಾನ್ಯ ಕಾರ್ಯಕರ್ತನ್ನಾಗಿ ಕೆಲಸ ಮಾಡುತ್ತಿದ್ದಾರೆ. ಸದಾ ನಮ್ಮೊಂದಿಗೆ ಬೆರೆತು ಕ್ಷೇತ್ರದ ಅಭಿವೃದ್ಧಿಗೆ ದುಡಿಯುವ ವ್ಯಕ್ತಿಯಾಗಿದ್ದರೆ. ನರೇಂದ್ರ ಮೋದಿಯವರ 10 ವರ್ಷದ ಜನಪರ ಕಾರ್ಯಕ್ರಮಗಳನ್ನು ಪ್ರತಿ ಹಳ್ಳಿ ಹಳ್ಳಿಗೂ ತಲುಪಿಸಲು ಕಾರ್ಯಕರ್ತರ ಜವಾಬ್ದಾರಿಯಾಗಿದೆ. ಕಾಂಗ್ರೆಸ್ ಸೋಲಿನ ಭಯದಿಂದ ನಮ್ಮ ಪಕ್ಷದ ಹಿರಿಯ ನಾಯಕ ಸಂಸದ ಶ್ರೀನಿವಾಸ್ ಪ್ರಸಾದ್ ಅವರನ್ನು ಭೇಟಿ ಮಾಡುತ್ತಿದ್ದಾರೆ. ಶ್ರೀನಿವಾಸ್ ಪ್ರಸಾದ್ ಅವರು ನಮ್ಮ ಜೊತೆ ಇದ್ದಾರೆ ಎಂದರು.

ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಾವಣೆ ಮಾಡುತ್ತಾರೆ ಎಂದು ಕಾಂಗ್ರೆಸ್ ಪಕ್ಷದವರು ಸುಳ್ಳು ಸುದ್ದಿಯನ್ನು ಹಬ್ಬಿಸಿ ಜನರ ದಾರಿಯನ್ನು ತಪ್ಪಿಸುತ್ತಿದ್ದಾರೆ. ಕಾಂಗ್ರೆಸ್ ಆಡಳಿತದಲ್ಲಿ ಡಾ .ಅಂಬೇಡ್ಕರ್ ಅವರ ಸಮಾಧಿ ಮಾಡಲು ಜಾಗ ನೀಡದವರು ಸಂವಿಧಾನದ ಬಗ್ಗೆ ಮಾತನಾಡುವ ನೈತಿಕತೆ ಕಾಂಗ್ರೆಸ್ ಪಕ್ಷಕ್ಕೆ ಇಲ್ಲ. ಸೋಲುವ ಬೀತಿಯಿಂದ ಸಂವಿಧಾನ ಬದಲಾವಣೆ ಬಗ್ಗೆ ಸುಳ್ಳು ಸುದ್ದಿ ಹಬ್ಬಿಸುವುದನ್ನು ಬಿಡಲ್ಲಿ ಎಂದರು. ನರೇಂದ್ರ ಮೋದಿಯವರು ಡಾ.ಅಂಬೇಡ್ಕರ್ ಅವರ ಜನ್ಮ ಭೂಮಿ ಹಾಗೂ ಧಿಕ್ಷಾ ಭೂಮಿಯನ್ನು ಐಕ್ಯ ಸ್ಥಳವನ್ನಾಗಿ ಮಾಡಿದ್ದಾರೆ. ಡಾ. ಅಂಬೇಡ್ಕರ್ ಅವರು ಬರೆದಿರುವ ಸಂವಿಧಾನದಡಿಯಲ್ಲಿ ಉತ್ತಮ ಆಡಳಿತ ನೀಡಿದ್ದಾರೆ. ಇದು ದೇಶದ ಭವಿಷ್ಯದ ಚುನಾವಣೆಯಾಗಿದೆ. ದೇಶದ ಹಿತ ರಕ್ಷಣೆಗೆ ಪ್ರಧಾನಿ ನರೇಂದ್ರ ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಬೇಕಿದೆ. ರಾಜ್ಯ ಸರ್ಕಾರದಿಂದ ರಾಜ್ಯದ ಅಭಿವೃದ್ಧಿಯಲ್ಲಿ ಶೂನ್ಯಯಾಗಿದೆ. ಕರ್ನಾಟಕದಲ್ಲಿ ಮೋದಿ ಅಲೆಯಿಂದ ಗ್ಯಾರಂಟಿ ಯೋಜನೆ ನಡೆಯುವುದಿಲ್ಲ. ಸುಭದ್ರ ರಾಷ್ಟ್ರಕ್ಕಾಗಿ ಬಿಜೆಪಿ ಅಭ್ಯರ್ಥಿ ಎಸ್. ಬಾಲರಾಜ್ ಅವರನ್ನು ಅತ್ಯಾಧಿಕ ಮತಗಳಿಂದ ಗೆಲ್ಲಿಸಿ ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಜಿ.ಪಂ ಮಾಜಿ ಸದಸ್ಯೆ ಮಂಗಳ ಸೋ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–4

21–04–2024

ತುಮಕೂರು–ಚಾಮರಾಜನಗರ

ಬಾಲಕಿಯನ್ನು ಅಪಹರಿಸಿ ಲೈಂಗಿಕ ದೌರ್ಜನ್ಯ : ಅಪರಾಧಿಗೆ 10 ವರ್ಷ ಶಿಕ್ಷೆ, 2 ಲಕ್ಷ ರೂ.ದಂಡ

■ ಕಾಯಕಯೋಗಿ ಸುದ್ದಿ
ಮಂಜುಸ್ವಾಮಿ ಎಂ ಎನ್.

ತುಮಕೂರು: ಅಪ್ರಾಪ್ತ ವಯಸ್ಸಿನ ಬಾಲಕಿಯನ್ನು ಅಪಹರಿಸಿ ಲೈಂಗಿಕ ದೌರ್ಜನ್ಯ ನಡೆಸಿದ ಅಪರಾಧಿಗೆ ಅಧಿಕ ಜಿಲ್ಲಾ ಸತ್ರ ನ್ಯಾಯಾಲಯ ಎಫ್.ಟಿ.ಎಸ್.ಸಿ.(ಪೋಕ್ಸೋ)ವು 10 ವರ್ಷ ಶಿಕ್ಷೆ ಮತ್ತು 2 ಲಕ್ಷ ರೂಪಾಯಿ ದಂಡ ವಿಧಿಸಿ ತೀರ್ಪು ನೀಡಿದೆ.

ತಿಪಟೂರು ನಗರದ ಸರಹದ್ದಿನ ಭೋವಿ ಕಾಲೋನಿ ನಿವಾಸಿ ಸೈಯಸ್ ಗೌಸ್ ಅಲಿಯಾಸ್ ಗೌಸ್ ಪಾಷ(40) ಎಂಬಾತ ವಿವಾಹಿತನಾಗಿದ್ದು 1 ಮಗುವಿನ ತಂದೆಯಾಗಿದ್ದರೂ ಸಹ, ಅಪ್ರಾಪ್ತ ಬಾಲಕಿಯನ್ನು ಪರಿಚಯ ಮಾಡಿಕೊಂಡು 06/05/2017ರಂದು ತನ್ನ ಕಾರಿನಲ್ಲಿ ಅಪಹರಿಸಿ ರಾಜಸ್ಥಾನದ ಅಜ್ಮೀರ್ ಗೆ ತೆರಳಿದ್ದು, ಅಲ್ಲಿ 26/05/2017 ರವರೆಗೆ ಬಾಲಕಿಯನ್ನು ಅಕ್ರಮ ಬಂಧನದಲ್ಲಿಟ್ಟುಕೊಂಡು ಪ್ರತಿ ದಿನ ಬಲವಂತವಾಗಿ ಲೈಂಗಿಕ ದೌರ್ಜನ್ಯ ಎಸಗಿದ್ದನು.



ಈ ಪ್ರಕರಣದ ತನಿಖೆ ನಡೆಸಿದ ತಿಪಟೂರು ನಗರದ ತನಿಖಾಧಿಕಾರಿ ದೀಪಕ್ ಎಂ. ಅವರು ಘನ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯಲ್ಲಿ ಸಲ್ಲಿಸಿದರು.

ಪ್ರಕರಣದ ವಿಚಾರಣೆಯಲ್ಲಿ ಸೈಯದ್ ಪಾಷ ವಿರುದ್ಧ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಅಧಿಕ ಜಿಲ್ಲಾ ಸತ್ರ ನ್ಯಾಯಾಲಯ ಎಫ್.ಟಿ.ಎಸ್.ಸಿ.(ಪೋಕ್ಸೋ)ಯ ನ್ಯಾಯಾಧೀಶರು ಅಪರಾಧಿಗೆ 10 ವರ್ಷ ಜೈಲು ಶಿಕ್ಷೆ 2 ಲಕ್ಷ ರೂಪಾಯಿ ದಂಡ ವಿಧಿಸಿ ತೀರ್ಪು ನೀಡಿದೆ. ನೊಂದ ಬಾಲಕಿಗೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ 2 ಲಕ್ಷ ಪರಿಹಾರ ಸೇರಿದಂತೆ ಒಟ್ಟು 4 ಲಕ್ಷ ಪರಿಹಾರವನ್ನು ನೀಡುವಂತೆ ಕೋರ್ಟ್ ಆದೇಶ ನೀಡಿದೆ. ಈ ಪ್ರಕರಣದಲ್ಲಿ ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕರಾದ ಆಶಾ ಕೆ.ಎಸ್. ವಾದ ಮಂಡಿಸಿದರು.

ಹನೂರು ವ್ಯಾಪ್ತಿಯಲ್ಲಿ ಸುನೀಲ್ ಬೋಸ್ ಪರ ಎಚ್‌ಸಿಎಂ ಮತಯಾಚನೆ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಹನೂರು ತಾಲೂಕಿನ ಮಲೆಮಹದೇಶ್ವರ ಬೆಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಜಲ್ವಾಂತ ಸಮಸ್ಯೆಗಳನ್ನು ಚುನಾವಣೆ ಬಳಿಕ ಸಚಿವರು ಹಿರಿಯ ಅಧಿಕಾರಿಗಳನ್ನು ಗ್ರಾಮಕ್ಕೆ ಕರೆತಂದು ಸಮಸ್ಯೆ ಬಗೆಹರಿಸಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ ಮಹಾದೇವಪ್ಪ ತಿಳಿಸಿದರು.

ಹನೂರು ಕ್ಷೇತ್ರ ವ್ಯಾಪ್ತಿಯ ಮಲೆಮಹದೇಶ್ವರ ಬೆಟ್ಟ, ಮಾರ್ಟಳ್ಳಿ, ರಾಮಾಪುರ, ಕೌದಳ್ಳಿ, ಲೊಕ್ಕನಹಳ್ಳಿ ಗ್ರಾಮಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನೀಲ್ ಬೋಸ್ ರವರ ಪರ ಚುನಾವಣಾ ಪ್ರಚಾರ ನಡೆಸಿ ಅವರು ಮಾತನಾಡಿದರು.

ಲೋಕಸಭಾ ಚುನಾವಣೆ ಸಂಬಂಧ ಕಳೆದ ಎರಡು ಮೂರು ದಿನಗಳಿಂದ ಕ್ಷೇತ್ರದಲ್ಲಿ ನಿರಂತರವಾಗಿ ಗ್ರಾಮಗಳಿಗೆ ಭೇಟಿ ನೀಡುತ್ತಿದ್ದೇನೆ, ಕಾಡಂಚಿನ ಗ್ರಾಮಗಳ ಜನರು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವುದು ನಾನು ಮನಗಂಡಿದ್ದೇನೆ, ಇದಲ್ಲದೇ ಮಾಜಿ ಶಾಸಕ ಆರ್ ನರೇಂದ್ರ ರವರು ಸಮಸ್ಯೆಗಳ ಬಗ್ಗೆ ಸಮಗ್ರ ಚರ್ಚೆ ನಡೆಸಿದ್ದಾರೆ.

ಕಾಡಂಚಿನಲ್ಲಿರುವ ಜನರಿಗೆ ಶಾಶ್ವತ ಪರಿಹಾರ ಸಿಗುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಅರಣ್ಯ ಇಲಾಖೆ ಸಚಿವರ ಜೊತೆ ಅಧಿಕಾರಿಗಳನ್ನೊಳಗೊಂಡತೆ ಮಲೆಮಹದೇಶ್ವರ ಬೆಟ್ಟದಲ್ಲಿ ಒಂದು ಸಭೆ ನಡೆಸಿ ಕಾನೂನಾತ್ಮಕವಾಗಿ ಪರಿಹಾರ ದೊರಕಿಸಿಕೊಡಲಾಗುವುದು, ಶ್ರೀ ಮಲೆ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲೂ ಹಲವಾರು ಸೂಚನೆಗಳನ್ನು ನೀಡಿದ್ದು ಸಮಸ್ಯೆಗಳನ್ನು ಬಗೆಹರಿಸಲು ಗ್ರಾಮಗಳಲ್ಲಿ ವಾಸಿಸುತ್ತಿರುವ ಜನರ ಸಮಸ್ಯೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಗಮನಕ್ಕೆ ತಂದು ಪರಿಹಾರ ಮಾಡುವುದಾಗಿ ಭರವಸೆ ನೀಡಿದರಲ್ಲದೇ ಈ ಭಾರಿಯ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿರುವ ಸುನೀಲ್ ಬೋಸ್ ಅವರಿಗೆ ತಮ್ಮ ಅಮೂಲ್ಯವಾದ ಮತವನ್ನು ನೀಡುವ ಮೂಲಕ ಜಯಶೀಲರನ್ನಾಗಿ ಮಾಡಬೇಕು ಎಂದು ಮನವಿ ಮಾಡಿದರು.

ಮಾಜಿ ಶಾಸಕ ಆರ್ ನರೇಂದ್ರ ಮಾತನಾಡಿ ಸ್ವಾತಂತ್ರ್ಯ ಬಂದು 75 ವರ್ಷಗಳು ಕಳೆದರು ಬೇಡಗಂಪಣ ಸಮುದಾಯಕ್ಕೆ ಯಾರೊಬ್ಬರು ವಸತಿ ಸೌಲಭ್ಯ ಕಲ್ಪಿಸಲಿಲ್ಲ ಕಳೆದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ 1750 ಮನೆಗಳನ್ನು ನಿರ್ಮಿಸಿ ಕೊಟ್ಟಿದ್ದೇವೆ, ಮಲೆಮಹದೇಶ್ವರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಕಾಡಂಚಿನ ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿದ್ದೇನೆ, ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ತಮಿಳುನಾಡಿನಿಂದ ಚಿಕ್ಕ ಬೋರವೆಲ್ ವಾಹನ ಕರೆತಂದು ಬೋರ್ವೆಲ್ ಕೊರಸಿ ನೀರಿನ ಸಮಸ್ಯೆ ಬಗೆಹರಿಸಿದ್ದೇನೆ, 8 ಗ್ರಾಮಗಳಿಗೆ ವಿದ್ಯುತ್ ಸೌಲಭ್ಯ ಕಲ್ಪಿಸಲು 6 ಕೋಟಿ ವೆಚ್ಚದಲ್ಲಿ ಕ್ರಿಯಾ ಯೋಜನೆ ಮಾಡಿ ಸರ್ಕಾರಕ್ಕೆ ಸಲ್ಲಿಸಿದ್ದೆ ವಿಧಾನಸಭಾ ಚುನಾವಣೆ ಬಂದ ಹಿನ್ನೆಲೆ ಸ್ಥಗಿತವಾಗಿದೆ, ಶಾಸಕರಾಗಿರುವವರು ಸಹ ಇದರ ಬಗ್ಗೆ ಗಮನಹರಿಸಲಿಲ್ಲ ಮುಂದಿನ ದಿನಗಳಲ್ಲಿ ಈ ಬಗ್ಗೆ ಸಚಿವರು ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ನವರನ್ನು ಒತ್ತಾಯಿಸಿ ಅನುದಾನವನ್ನು ಬಿಡುಗಡೆ ಮಾಡಿಸಿ ಅಭಿವೃದ್ಧಿ ಪಡಿಸಲಾಗಿವುದು ಎಂದರು.



ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ಮಾತನಾಡಿ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದ ಸರ್ಕಾರ ಚುನಾವಣಾ ಪೂರ್ವದಲ್ಲಿ ನೀಡಿದ್ದ 5 ಭರವಸೆಗಳನ್ನು ಸರ್ಕಾರ ಬಂದ 5 ತಿಂಗಳಲ್ಲಿ ಈಡೇರಿಸಿದೆ, ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಯುವ ನ್ಯಾಯ, ಮಹಿಳಾ ನ್ಯಾಯ, ರೈತ ನ್ಯಾಯ, ಶ್ರಮಿಕ ನ್ಯಾಯ ಪಾಲುದಾರಿಕೆಯ ನ್ಯಾಯ ಯೋಜನೆಯಡಿ ಬಡವರಿಗೆ ಉತ್ತಮ ಯೋಜನೆ ಕೊಡಲು ನಿರ್ಧರಿಸಲಾಗಿದೆ. ಈ ನಿಟ್ಟಿನಲ್ಲಿ ದೇಶದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ಬಂದರೆ ಈ ಎಲ್ಲ ಸೌಲಭ್ಯಗಳು ಬಡವರಿಗೆ ತಲುಪಲಿದೆ. ಇದಲ್ಲದೆ ನನಗೆ ಅಧಿಕಾರ ನೀಡಿದರೆ ಮಲೆ ಮಾದೇಶ್ವರ ಬೆಟ್ಟ ಕಾಡಂಚಿನ ಗ್ರಾಮಗಳ ಸಮಸ್ಯೆಗಳನ್ನು ಬಗೆಹರಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದರು.

ಮತದಾನ ಬಹಿಷ್ಕಾರ ಮಾಡಬೇಡಿ: ಮತದಾನ ಎಂಬುವುದು ಪ್ರಜಾಪ್ರಭುತ್ವದಲ್ಲಿ ಡಾ. ಬಿಆರ್ ಅಂಬೇಡ್ಕರ್ ರವರು ಕೊಟ್ಟಿರುವ ನಮ್ಮ ಹಕ್ಕು, ನಮ್ಮ ಮತವನ್ನು ಚಲಾಯಿಸಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡಿ ಎಂದು ತಮ್ಮ ಹಕ್ಕನ್ನು ಕೇಳಬೇಕು. ಚುನಾವಣೆ ಮುಗಿದ ನಂತರ ಖಂಡಿತವಾಗಿಯೂ ನಿಮ್ಮ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ವಹಿಸುತ್ತೇವೆ ತಾವು ಮತದಾನ ಬಹಿಷ್ಕಾರ ಮಾಡದೆ ಮತದಾನ ಮಾಡುವಂತೆ ಮಾಜಿ ಶಾಸಕ ಆರ್ ನರೇಂದ್ರ ಮನವಿ ಮಾಡಿದರು.

ಕಾಂಗ್ರೆಸ್ ಸೇರ್ಪಡೆ: ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತಗಳನ್ನು ಮೆಚ್ಚಿ ಬಿಜೆಪಿ, ಜೆಡಿಎಸ್ ಪಕ್ಷಗಳನ್ನು ತೊರೆದು ಮಲೆ ಮಾದೇಶ್ವರ ಬೆಟ್ಟ ಗ್ರಾಮ ಪಂಚಾಯಿತಿ ಹಾಗೂ ಮಾಟಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಐವತ್ತಕ್ಕೂ ಹೆಚ್ಚು ಕಾರ್ಯಕರ್ತರುಗಳು ಕಾಂಗ್ರೆಸ್ ಸೇರ್ಪಡೆಯಾದರು.

ಸಭೆಯಲ್ಲಿ , ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಮಾಜಿ ಸಚಿವ ಕೋಟೆ ಶಿವಣ್ಣ, ಮಾಜಿ ಶಾಸಕರುಗಳಾದ ಜಿ ಎನ್ ನಂಜುಂಡಸ್ವಾಮಿ, ವೇಣುಗೋಪಾಲ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಈಶ್ವರ್, ಮುಕುಂದವರ್ಮ, ಗ್ರಾಮ ಪಂಚಾಯಿತಿ ಅಧ್ಯಕ್ಷ ಇಗ್ನೇಶಿ ಮುತ್ತು ಉಪಾಧ್ಯಕ್ಷೆ ನದಿಯಾ ರಾಮಲಿಂಗಂ, ಸದಸ್ಯರುಗಳಾದ ಅರುಳ್ ಸೆಲ್ವಂ, ಸುರೇಶ್, ಪಟ್ಟಣ ಪಂಚಾಯಿತಿ ಸದಸ್ಯ ಗಿರೀಶ್, ಹರೀಶ್, ಕೆ.ಪಿ.ಸಿ.ಸಿ ಸದಸ್ಯ ನರೇಂದ್ರ, ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಚೇತನ್ ದೊರೆರಾಜು, ಅಲೆಮಾರಿ ಸಂಘದ ಅಧ್ಯಕ್ಷೆ ಪಲ್ಲವಿ, ಮುಖಂಡರಾದ ನವನೀತ್ ಗೌಡ, ಪೆದ್ದನ ಪಾಳ್ಯ ಮಣಿ, ಶಿವು, ಪಾಳ್ಯ ಕೃಷ್ಣ, ಎಲ್ ನಾಗೇಂದ್ರ ರಾಜು, ಮಾದೇಶ್, ಅಶ್ವಿನ್ ಉದ್ಯಮಿ ರಂಗಸ್ವಾಮಿ ಸೇರಿದಂತೆ ಇನ್ನಿತರರು ಹಾಜರಿದ್ದರು.

ಹುಲಿ ದಾಳಿ: ಆನೆ ಮರಿ ಸಾವು

ಚಾಮರಾಜನಗರ: ಹುಲಿ ದಾಳಿ ನಡೆಸಿದ ಪರಿಣಾಮ ಆನೆ ಮರಿ ನಡುರಸ್ತೆಯಲ್ಲೆ ಸಾವನ್ನಪ್ಪಿರುವ ಘಟನೆ ತಾಲೂಕಿನ ಬಂಡೀಪುರ ಅಭಯಾರಣ್ಯದಲ್ಲಿ ನಡೆದಿದೆ.

ಬಂಡೀಪುರ–ಊಟಿ ರಾಷ್ಟ್ರೀಯ ಹೆದ್ದಾರಿ ಬದಿಯ ರಸ್ತೆ ಬದಿಯಲ್ಲಿ ಮರಿಯಾನೆ ಮೇವು ಮೆಯ್ಯುತ್ತಿದ್ದ ಸಂದರ್ಭ ಹುಲಿ ಏಕಾ ಏಕಿ ದಾಳಿ ನಡೆಸಿ ಕೊಂದು ಹಾಕಿದೆ. ಕೂಗಳತೆ ದೂರಲ್ಲಿದ್ದ ತಾಯಿಯಾನೆ ಸ್ಥಳಕ್ಕೆ ಧಾವಿಸುವಷ್ಟರಲ್ಲಿ ಹುಲಿ ಓಡಿ ಹೋಗಿತ್ತು ಎನ್ನಲಾಗುತ್ತಿದೆ.

ಮರಿಯಾನೆ ಮೃತ ದೇಹದ ಮುಂದೆ ನಿಂತು ತಾಯಿಯಾನೆ ರೋಧಿಸುತ್ತಿದೆ. ಇದರಿಂದ ಬಂಡೀಪುರ ಮಾರ್ಗವಾಗಿ ಸಂಚರಿಸುತ್ತಿದ್ದ ವಾಹನಗಳು ತಾಯಿಯಾನೆ ದಾಳಿ ಮಾಡಬಹುದು ಎಂಬ ಆಂತಕದಲ್ಲಿ ಸಂಚಾರ ಮಾಡದೆ ನಿಂತಲ್ಲೆ ನಿಂತೆ. ಇದರಿಂದ ಟ್ರಾಫಿಕ್ ಜಾಮ್ ಆಗಿದ್ದು ಕಿ.ಮೀ ದೂರದವರೆಗೆ ವಾಹನಗಳು ಸಾಲುಗಟ್ಟಿ ನಿಂತಿದ್ದವು.

ಮೃತ ಕಾಡಾನೆಯನ್ನು ರಸ್ತೆಯಿಂದ ತೆರವು ಮಾಡುವಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಮುಂದಾಗಿದ್ದಾರೆ.

ಯಾವುದೇ ಸಮುದಾಯದವರೇ ಆಗಲಿ ಕಾನೂನು ಬಾಹಿರ ನಡೆದರೆ, ಮುಲಾಜಿಲ್ಲದೇ ಕಾನೂನು ಕ್ರಮ

■ ಕಾಯಕಯೋಗಿ ಸುದ್ದಿ
ಮಂಜುಸ್ವಾಮಿ ಎಂ ಎನ್

ತುಮಕೂರು: ರಾಜ್ಯದ ಜನತೆಗೆ ಗೃಹ ಸಚಿವನಾಗಿ ಭರವಸೆ ಕೊಡಲು ಬಯಸುತ್ತೇನೆ. ಯಾರೇ ಆದರೂ ಕಾನೂನಿಗೆ ವಿರುದ್ಧವಾಗಿ ನಡೆದುಕೊಂಡರೆ ರಕ್ಷಣೆ ಮಾಡುವಂತಹ ಪ್ರಮೇಯವೇ ಇಲ್ಲ ಎಂದು ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದ್ದಾರೆ.

ತುಮಕೂರಿನಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಅವರು ಯಾರೇ ಆಗಲಿ. ಬೆಂಗಳೂರಿನಲ್ಲಿ ನಡೆದ ಘಟನೆ ದುರದೃಷ್ಟಕರವಾದುದಾಗಿದೆ. ಶ್ರೀರಾಮನ ನವಮಿ ದಿನ ಜೈ ಶ್ರೀರಾಮ್ ಘೋಷಣೆ ಕೂಗೋದು ಸಹಜ. ಅದಕ್ಕೆ ಇನ್ನೊಬ್ಬರು ಬೇರೆ ಸ್ಲೋಗನ್ ಕೂಗಿದ್ದಾರೆ. ಘಟನೆ ನಡೆದ ಬಳಿಕ ಅವರನ್ನು ರಕ್ಷಣೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಅದರಲ್ಲಿ ಯಾರನ್ನೂ ರಕ್ಷಣೆ ಮಾಡೋದಾಗಲಿ, ಓಲೈಸೋದಾಗಲಿ ನಾವು ಮಾಡೋದಿಲ್ಲ. ಕಾನೂನು ಕ್ರಮವನ್ನು ಯಾವುದೇ ಮುಲಾಜಿಲ್ಲದೇ ತೆಗೆದುಕೊಳ್ಳುತ್ತೇವೆ ಎಂದರು.

ಹುಬ್ಬಳ್ಳಿ ಘಟನೆ: ಹುಬ್ಬಳ್ಳಿಯಲ್ಲಿ ಕಾಲೇಜು ಯುವತಿ ಕೊಲೆ ವಿಚಾರದಲ್ಲಿ, ಲವ್ ಆಫೆರ್ ಇತ್ತು ಇಬ್ಬರು ಒಟ್ಟಿಗೆ ಕೆಲಸ ಮಾಡ್ತಾ ಇದ್ದರು. ಪರಸ್ಪರ ಒಬ್ಬರನೊಬ್ಬರು ಪ್ರೀತಿಸ್ತಾ ಇದ್ದರು. ನಂತರ ಇದ್ದಕಿದ್ದ ಹಾಗೆ ಆ ಹೆಣ್ಣು ಮಗಳು ದೂರ ಆಗೋದಕ್ಕೆ ಪ್ರಯತ್ನಿಸಿದಾಗ ಘಟನೆ ನಡೆದಿದೆ ಎಂದು ಹೇಳಿದರು. ಮಗಳನ್ನು ಫಾಲೋ ಮಾಡ್ತಾ ಇದ್ದ ತಾಯಿ ಮೇಲೂ ಹಲ್ಲೆ ಮಾಡಿದ್ದಾರೆ, ಅವರನ್ನು ರಕ್ಷಣೆ ಮಾಡಲಾಗಿದೆ. ಈ ಘಟನೆಗೂ ರಾಜಕೀಯಕ್ಕೂ ಯಾವುದೇ ಸಂಬಂಧ ಇಲ್ಲ ಎಂದು ತಿಳಿಸಿದರು. ಇಂಥಹ ಘಟನೆಗಳು ಆಕಸ್ಮಿಕವಾಗಿ ನಡೆಯುತ್ತವೆ. ಅಂಥವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

ಬೆಂಗಳೂರು ಘಟನೆಯಲ್ಲಿ ವೀಕ್ ಸೆಕ್ಷನ್ ಹಾಕಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ, ಪ್ರಾರಂಭದಲ್ಲಿ ಯಾವ ಪ್ರಕರಣ ದಾಖಲಿಸಿಕೊಳ್ಳಬೇಕೋ ಅದನ್ನು ದಾಖಲು ಮಾಡಲಾಗಿದೆ. ತನಿಖೆ ಹಂತದಲ್ಲಿ ಯಾವುದನ್ನು ???ಡ್ ಮಾಡಬೇಕೋ ಅದನ್ನು ಮಾಡಲಾಗುವುದು ಎಂದು ತಿಳಿಸಿದರು. ಸಾಕ್ಷಾಧಾರಗಳ ಆಧಾರದ ಮೇಲೆ ಸೆಕ್ಷನ್ ಗಳನ್ನು ಹಾಕಲಾಗುವುದು. ಈ ಸೆಕ್ಸನ್ ಹಾಕಿಲ್ಲ, ಆ ಸೆಕ್ಷನ್ ಹಾಕಿಲ್ಲ ಅನ್ನೋಕೆ ಆಗಲ್ಲ. ತನಿಖೆಯ ಆಧಾರದ ಮೇಲೆ ಸೆಕ್ಷನ್ ಹಾಕಲಾಗುತ್ತದೆ ಎಂದರು.



ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ಇಂಥಹ ಘಟನೆ ಮರುಕಳಿಸುತ್ತದೆ ಎಂಬ ಬಿಜೆಪಿ ಆರೋಪಕ್ಕೆ ಸಂಬಂಧಿಸಿದಂತೆ, ಬಿಜೆಪಿ ಸರ್ಕಾರ ಇದ್ದಾಗಲೂ ಹಲವು ಘಟನೆಗಳು ನಡೆದ ಬಗ್ಗೆ ಮಾಹಿತಿ ಇದೆ ಎಂದರು.

ಅಶೋಕ್ ಮತ್ತು ಆರಗ ಜ್ಞಾನೇಂದ್ರ, ಬೊಮ್ಮಾಯಿ ಅವರು ಗೃಹ ಮಂತ್ರಿ ಇದ್ದಾಗ ಇಂಥಹ ಘಟನೆಗಳು ನಡೆದಿದೆ. ಯಾರೋ ಒಬ್ಬರು ಇದ್ದಾಗ ಇಂಥಹ ಘಟನೆ ನಡೆಯುತ್ತದೆ. ಇನ್ನೊಬ್ಬರು ಇದ್ದಾಗ ನಡೆಯಲ್ಲ ಅನ್ನುವ ಪ್ರಶ್ನೆ ಇಲ್ಲ. ಈಗ ಇಡೀ ರಾಜ್ಯದಲ್ಲಿ ಶ್ರೀರಾಮ ನವಮಿ ದಿನ ಎಷ್ಟು ಘಟನೆ ನಡೆದಿದೆ. ಇದೊಂದು ಹೊರತು ಪಡಿಸಿದರೆ ಬೇರೆ ನಡೆದಿಲ್ಲ ಎಂದು ಹೇಳಿದರು.

ಯಾರು ಕಾನೂನು ಬಾಹಿರವಾಗಿ ನಡೆದುಕೊಳ್ಳುತರೋ, ಅವರು ಯಾವುದೇ ಸಮುದಾಯ ಆಗಲಿ ಮುಲಾಜಿಲ್ಲದೇ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದರು. ಅವರನ್ನು ಓಲೈಸುವ ಕೆಲಸ ನಾವು ಯಾವತ್ತೂ ಮಾಡೋದಿಲ್ಲ. ಸಮಾಜವನ್ನು ಶಾಂತಿಯಿಂದ ಇಡಬೇಕು ಅನ್ನೋದೆ ನಮ್ಮ ಉದ್ದೇಶ ಎಂದರು.

ಹುಬ್ಬಳ್ಳಿ ಘಟನೆ ಲವ್ ಜಿಹಾದ್ ಎಂದು ಜೋಶಿ ಹೇಳಿಕೆ ವಿಚಾರದಲ್ಲಿ, ಅದು ಇಬ್ಬರ ನಡುವೆ ಪರಸ್ಪರ ಪ್ರೀತಿ ಉಂಟಾಗಿ, ಯಾವಾಗ ಆ ಹೆಣ್ಣುಮಗಳು ದೂರ ಹೋಗಲು ಶುರು ಮಾಡಿದ್ದಳೋ ಆ ಹುಡುಗ ಹೋಗಿ ಚುಚ್ಚಿದ್ದಾನೆ ಅದೆಲ್ಲಿ ಲವ್ ಜಿಹಾದ್? ನನಗೆ ಕಾಣಿಸಿಲ್ಲ ಎಂದರು. ನನ್ನನ್ನು ಬಿಟ್ಟು ಬೇರೆ ಮದುವೆ ಮಾಡಿಕೊಳ್ತಾಳೋ ಏನೋ ಅಂದುಕೊಂಡು, ಹೀಗೆ ಆಗಿದೆ. ನನಗೆ ಇದರ ಪೂರ್ತಿ ಮಾಹಿತಿ ಗೊತ್ತಿಲ್ಲ. ಪರಸ್ಪರ ಪ್ರೀತಿ ಮೇಲೆ ಆಗಿರುವ ಘಟನೆ ಇದು ಎಂದರು. ಲವ್ ಜಿಹಾದ್ ಅನ್ನೋದು ಕಾಣುತ್ತಿಲ್ಲ. ಬಿಜೆಪಿಯವರು ಸ್ವಾಭಾವಿಕವಾಗಿ ಇಂಥಹ ವಿಚಾರದಲ್ಲಿ ಕಾಂಗ್ರೆಸ್ ನ್ನು ದೂಷಣೆ ಮಾಡೋದು ಅವರ ಕೆಲಸ ಎಂದರು.

ಅದು ಅಷ್ಟು ಸಮಂಜಸ ಅಲ್ಲ, ನಾವು ಕಾನೂನು ಪ್ರಕಾರ ಕಂಟ್ರೋಲ್ ಮಾಡ್ತೀವಿ. ಈ ಚುನಾವಣೆ ಸಂದರ್ಭದಲ್ಲಿ ಎಲ್ಲವನ್ನೂ ರಾಜಕೀಯ ದೃಷ್ಟಿಯಿಂದ ನೋಡೋದು ಒಳ್ಳೆಯದಲ್ಲ. ಹಿಂಗೆ ತನಿಖೆ ಮಾಡಿ, ಈ ಸೆಕ್ಷನ್ ಹಾಕಿ ಎಂದು ಅವರು ಹೇಳೋಕೆ ಆಗಲ್ಲ. ಸಾಕ್ಷಾಧಾರಗಳ ಆಧಾರದ ಮೇಲೆ ಸೆಕ್ಷನ್ ಹಾಕಲಾಗುತ್ತದೆ ಎಂದರು.

ಇವಿಎಂ ಮೇಲೆ ಅನುಮಾನ ಈಗಲೂ ಇದೆ. ನಾವು ಮೊದಲಿನಿಂದಲೇ ಹೇಳುತ್ತಾ ಬಂದಿದ್ದೇವೆ ಎಂದರು. ತಾಂತ್ರಿಕವಾಗಿ ಸಾಬೀತು ಮಾಡಿ ತೋರಿಸಿದ್ದೇವೆ. ಕೇರಳದಲ್ಲಿ ಯಾವುದೇ ಬಟನ್ ಒತ್ತಿದರೂ ಬಿಜೆಪಿಗೆ ಹೋಗುತ್ತದೆ ಅನ್ನೋದು ಪ್ರೂವ್ ಆಗಿದೆ. ಅವರು ಎಲ್ಲಾ ಕ್ಷೇತ್ರದಲ್ಲಿ ಹಾಗೆ ಮಾಡಲ್ಲ. ತುಂಬಾ ಬುದ್ಧಿವಂತಿಕೆಯಿಂದ ಮಾಡುತ್ತಾರೆ ಎಂದರು. 150–200 ಕ್ಷೇತ್ರ ಬಿಟ್ಟು, ಅಡಿಷನಲ್ ಕ್ಷೇತ್ರದಲ್ಲಿ ಹ್ಯಾಕ್ ಮಾಡುತ್ತಾರೆ ಎಂಬ ಅನುಮಾನ ಇದೆ ಎಂದು ತಿಳಿಸಿದರು.

20 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟ ಅಧ್ಯಕ್ಷ – ಪಿಡಿಒ ಲೋಕಯುಕ್ತ ಬಲೆಗೆ

■ ಕಾಯಕಯೋಗಿ ಸುದ್ದಿ
ಮಂಜುಸ್ವಾಮಿ ಎಂ ಎನ್



ಕೊರಟಗೆರೆ : ಅಡಿಕೆ ತಟ್ಟೆ ತಯಾರಿಕಾ ಘಟಕಕ್ಕೆ ಎನ್ ಓ ಸಿ ನೀಡಲು 20,000 ರೂ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-5

21-04-2024

ಹಾಸನ-ರಾಮನಗರ

28ಕ್ಕೆ 28 ಸ್ಥಾನ ಕಾಂಗ್ರೆಸ್ ಗೆಲ್ಲಲಿದೆ



ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಳಪಡುವ ಗೌಡಹಳ್ಳಿ, ಹರಳೆ, ಮುಳ್ಳೂರು, ತೇರಂಬಳ್ಳಿ ಹಾಗೂ ಗೂಬ್ಬಳಿಪುರ ಗ್ರಾಮಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನಿಲ್ ಬೋಸ್ ಪರ ಶಾಸಕರಾದ ಎ ಆರ್ ಕೃಷ್ಣಮೂರ್ತಿ ಬಿರುಸಿನ ಮತ ಪ್ರಚಾರ ನಡೆಸಿದರು. ಕಳೆದ್ದ ವಿಧಾನಸಭಾ ಚುನಾವಣೆ ಪೂರ್ವ ದಲ್ಲಿ ಕಾಂಗ್ರೆಸ್ ಪಕ್ಷ ನೀಡಿದ 5 ಗ್ಯಾರಂಟಿ ಯೋಜನೆ ಗಳ ಭರವಸೆ ನೀಡಿತ್ತು, ರಾಜ್ಯ ದ ಜನತೆ ಗ್ಯಾರಂಟಿ ಗಳಿಗೆ ಮಾನ್ಯತೆ ನೀಡಿ ರಾಜ್ಯದಲ್ಲಿ 135 ಶಾಸಕರನ್ನು ಆಯ್ಕೆ ಮಾಡಿ ಕಾಂಗ್ರೆಸ್ ಸರ್ಕಾರ ಅಧಿಕಾರ ಕ್ಕೆ ಬರಲು ಸಹಾಯ ವಾಯಿತು. ಹೀಗಾಗಿ ಚುನಾವಣೆ ಯ ನಂತರ ಗ್ಯಾರಂಟಿ ಅನುಷ್ಠಾನ ನೀಡಿದ ಮೇಲೆ ಇನ್ನು ಲೋಕಸಭಾ ಚುನಾವಣೆ ಯಲ್ಲಿ 28 ಕ್ಕೆ 28 ಸ್ಥಾನ ವು ಕಾಂಗ್ರೆಸ್ ಗೆಲ್ಲಲಿದೆ ಎಂಬ ವಿಶ್ವಾಸ ವಿದೆ,

ನೆನ್ನೆ ಮಂಡ್ಯ ದಲ್ಲಿ ನಾಡಿದೆ ಸಮಾವೇಶ ದಲ್ಲಿ ರಾಷ್ಟ್ರ ಯುವ ನಾಯಕ ರಾದ ರಾಹುಲ್ ಗಾಂಧಿ ರವರು ಕೇಂದ್ರ ದಲ್ಲಿ ಕಾಂಗ್ರೆಸ್ ಅಧಿಕಾರ ಕ್ಕೆ ಬಂದರೆ ಪ್ರತಿ ಕುಟುಂಬ ಕೂ ತಿಂಗಳಿಗೆ 10,500 ಸಾವಿರ ನೀಡುವುದಾಗಿ ಹೇಳಿದರೆ, ಮತ್ತೆ AICC ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಕೆ ರವರು ಪ್ರತಿ ಬಡ ಕುಟುಂಬ ಗಳಿಗೆ ವಾರ್ಷಿಕ 1 ಲಕ್ಷ 24 ಸಾವಿರ ದೊರೆಯಲಿದೆ ಎಂದಿದ್ದಾರೆ.

ಮತ್ತು ಸಿದ್ದರಾಮಯ್ಯ ನವರ ಸರ್ಕಾರ ಅಧಿಕಾರ ಕ್ಕೆ ಬಂದ 10 ತಿಂಗಳು ಗಳಲೇ 5 ಗ್ಯಾರಂಟಿ ಯೋಜನೆ ಗಳನ್ನು ಅನುಷ್ಠಾನ ಮಾಡಿದರೆ ಆದರೆ ಬಿಜೆಪಿ ರವರು ಗ್ಯಾರಂಟಿ ಯೋಜನೆ ಗಳು ಸರಿಯಾಗಿ ಜನರಿಗೆ ತಲುಪಿಲ್ಲ ಎಂದು, ಆದರೆ ಬಿಜೆಪಿ ಪಕ್ಷ ದ ಕಾರ್ಯಕರ್ತರ ಮನೆಯ ಮಹಿಳೆಯರು ನಮ್ಮ ಯಜಮಾನ್ರು ಬಿಜೆಪಿ ಯಲ್ಲಿ ಇದ್ದರು ಕಾಂಗ್ರೆಸ್ ಸರ್ಕಾರ ದ ಗ್ಯಾರಂಟಿ ಯೋಜನೆ ಗಳು ನಮಗೆ ತಲುಪಿದೆ ಹೀಗಾಗಿ ನಮ್ಮ ಮತ ಕಾಂಗ್ರೆಸ್ ಪಕ್ಷ ಗೆ ಎನ್ನುವ ಮಾತುಗಳನ್ನು ಹಾಡುದಿದ್ದರೆ, ಇಷ್ಟು ಎಲ್ಲ ಆದರೂ ಬಿಜೆಪಿ ನವರು ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆ ಗಳನ್ನು ಬೇಡವೆಂದು ಹೇಳಿ ಹಣ ವಾಪಸ್ ನೀಡುತ್ತಿದ್ದಾರೆ ಎಂದು ಶಾಸಕರು ಬಿಜೆಪಿ ಗೆ ಟಾಂಗ್ ಕೊಟ್ಟರು.

ಒಂಭತ್ತು ಜನ ಆರೋಪಿಗಳು ಗಡಿಪಾರು : ಜಿಲ್ಲಾಧಿಕಾರಿ ಆದೇಶ

■ ಕಾಯಕಯೋಗಿ ಸುದ್ದಿ

ರಾಮನಗರ: ರಾಮನಗರ ಜಿಲ್ಲೆಯಲ್ಲಿ ಸ್ಥಳೀಯವಾಗಿ ಮಾರಕಾಸ್ತ್ರಗಳನ್ನು ಹಿಡಿದು ಆರೋಪಿ ಗಳು ತನ್ನ ಸಹಚರರೊಂದಿಗೆ ಸೇರಿ ಅಕ್ರಮ ಕೂಟ ಕಟ್ಟಿಕೊಂಡು ದೊಂಬಿ ಗಲಾಟೆ ಸೇರಿದಂತೆ ಸಮಾಜಘಾತುಕ ಚಟುವಟಿಕೆಗಳಲ್ಲಿ ನಿರತರಾಗಿದ್ದು, ಇವರು ಅಕ್ರಮ ಚಟುವಟಿಕೆಗಳನ್ನು ಮಾಡದಂತೆ ನಿಯಂತ್ರಿಸಲು ಕರ್ನಾಟಕ ಪೊಲೀಸ್ ಅಧಿನಿಯಮ-1963 ಕಲಂ 55ರ (ಎ)(ಬಿ) ರಡಿಯಲ್ಲಿ ಹಾಗೂ ಸ್ಥಳೀಯ ಠಾಣಾಧಿಕಾರಿಗಳು ನೀಡಿರುವ ವರದಿ ಹಾಗೂ ಪೊಲೀಸ್ ಅಧೀಕ್ಷಕರು ನೀಡಿರುವ ವರದಿ ಮತ್ತು ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ಸಲ್ಲಿಸಿರುವ ವರದಿಗಳನ್ನು ಆಧರಿಸಿ ಆರೋಪಿಗಳ ವಿರುದ್ಧ ಮಾಡಿರುವ ಆರೋಪಗಳು ಮುಂಬರುವ ಸಾರ್ವತ್ರಿಕ ಚುನಾವಣೆ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವ ಸಂದರ್ಭವಿದ್ದು ಆರೋಪಿಗಳ ವಿರುದ್ಧ ಮಾಡಿರುವ ಆರೋಪಗಳು ಮತ್ತು ದಾಖಲಾಗಿರುವ ಪ್ರಕರಣಗಳು ತುಂಬಾ ಗಂಭೀರ ಹಾಗೂ ಸೂಕ್ಷ್ಮತೆಯಿಂದ ಕೂಡಿದ್ದು, ಆರೋಪಿಗಳ ವಿರುದ್ಧ ದಾಖಲಾಗಿರುವ ಪ್ರಕರಣಗಳೆಲ್ಲವೂ ಸೂಕ್ಷ ??ತೆಯಿಂದ ಕೂಡಿರುವುದರಿಂದ ಸದರಿ 9 ಜನ ಆರೋಪಿಗಳ ವರ್ತನೆಯು ಭಾರತೀಯ ದಂಡ ಪ್ರಕ್ರಿಯೆ ಸಂಹಿತೆ ಕಲಂ 110 ರಡಿಯಲ್ಲಿ ರೂಢಿಗತ ಆರೋಪ ಮಾಡಿರುವುದು ಹಾಗೂ ರಾಮನಗರ ಜಿಲ್ಲೆ ಸುತ್ತಮುತ್ತಲು ರೌಡಿಯಾಗಿ ಸಾರ್ವಜನಿಕರನ್ನು ಬೆದರಿಸುವುದು, ಸಾರ್ವಜನಿಕರ ಆಸ್ತಿಪಾಸ್ತಿಗಳನ್ನು ಹಾನಿ ಉಂಟು ಮಾಡುವ ಹಾಗೂ ಕೊಲೆ, ಬೆದರಿಕೆ, ದರೋಡೆಗೆ ವಂಚು ಹಾಕಿರುವುದು ಕಂಡು ಬಂದಿದ್ದು, ಈತನಿಂದ ಪ್ರಕ್ಷುಬ್ಧ ಪರಿಸ್ಥಿತಿ ಉಂಟಾಗಿ ಶಾಂತಿ ಭಂಗ ಉಂಟಾಗುವ ಸಂದರ್ಭಗಳು ಕಂಡುಬರುವುದರಿಂದ ದಿನಾಂಕ: 08-04-2024 ರಿಂದ 7-10-2024ರ ವರೆಗೆ 6 ತಿಂಗಳು ರಾಮನಗರ ಜಿಲ್ಲೆಯಿಂದ ಗಡಿಪಾರು ಮಾಡಿ ಜಿಲ್ಲಾಧಿಕಾರಿ ಹಾಗೂ ಚುನಾವನಾಧಿಕಾರಿಗಳು ಆದೇಶಿಸಿದ್ದಾರೆ.

9 ಜನ ಆರೋಪಿಗಳ ವಿವರ: 1. ಯೋಗೇಶ್ ಕುಮಾರ್ ಹೆಚ್.ವಿ @ ಯೋಗಿ ಬಿನ್ ವೆಂಕಟೇಶ್ ಎ.ವಿ ಆಗಲಡಕಲು, ಕೋಡಿಹಳ್ಳಿ ಹೋಬಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ, 2. ಆನಂದ @ ಪುಳಚಿ ಬಿನ್ ಕಾಂತರಾಜು, ಹೊಸಬಡಾವಣೆ, ತಿರುಮಲೆ, ಮಾಗಡಿ ಟೌನ್, ರಾಮನಗರ ಜಿಲ್ಲೆ, 3. ಮೊಹಮ್ಮದ್ ಜಾಹೀದ್ ಪಾಷ @ ಜಾಹೀದ್ ಬಿನ್ ಇಲಿಯಾಜ್ ಪಾಷ @ ಇಲಿಯಾಜ್ @ ಡ್ಯಾನಿ, 32 ವರ್ಷ, ಮನೆ ನಂ. 5758 ವಾರ್ಡ್ ನಂ. 24, 2ನೇ ಹಂತ ಯಾರಾಬ್ ನಗರ, ರಾಮನಗರ ಟೌನ್, 4. ರಾಮನಗರ ಜಿಲ್ಲೆ, ದೀಕ್ಷಿತ್ ಡಿ ಬಿನ್ ಧನಂಜಯ್ಯ, ಮಂಚನಾಯ್ಕನಹಳ್ಳಿ ಗ್ರಾಮ, ಬಿಡದಿ ಹೋಬಳಿ, ರಾಮನಗರ ಜಿಲ್ಲೆ, 5. ರಮೇಶ್ @ ಮೀನುಳಿ ಬಿನ್ ಉಂಗ್ರಾಳಯ್ಯ, 25 ವರ್ಷ, ಪರಂಗಿ, ಚಿಕ್ಕನಪಾಳ್ಯ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ, 6. ಆಕಾಶ ಬಿನ್ ಲೇಟ್ ಪ್ರಭು, 25 ವರ್ಷ, ಖಾಸಗಿ ಕೆಲಸ, ಬಿಳಗುಂಬ ಗ್ರಾಮ, ಕಸಬಾ ಹೋಬಳಿ, ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ, 7. ನರಸಿಂಹಮೂರ್ತಿ @ ಕಠಾರಿ ಬಿನ್ ಬಸವಯ್ಯ, 34 ವರ್ಷ, ಹುಲಿಕಲ್ ಗ್ರಾಮ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ.

8. ಉಸ್ಮಾನ್ ಪಾಷಾ @ ಮೊಹಮ್ಮದ್ ಉಳ್ಳ ಪಾಷಾ ಬಿನ್ ಲೇಟ್ ಅಶ್ರಫ್ ಪಾಷಾ, 30 ವರ್ಷ, ಹಳೇ ಮಸೀದಿ ಮೊಹಲ್ಲಾ, ಉರ್ದು ಶಾಲೆ ಹತ್ತಿರ, ಮಾಗಡಿ ಟೌನ್ ಈತನು ಸಾರ್ವಜನಿಕ ಸ್ಥಳಗಳಲ್ಲಿ ಮಾರಕಾಸ್ತ್ರಗಳನ್ನು ಹಿಡಿದು ತನ್ನ ಸಹಚರರೊಂದಿಗೆ ಸೇರಿಕೊಂಡು ಅಕ್ರಮ ಕೂಟ ಕಟ್ಟಿಕೊಂಡು ದರೋಡೆಗೆ ಯತ್ನ ಹಾಗೂ ಅಮಾಯಕ ರೈತರ ದನಗಳು, ಕುರಿ, ಮೇಕೆಗಳನ್ನು ಕಟಾವು ಮಾಡುವ ಸಲುವಾಗಿ ಕಳವು ಮಾಡಿ ಅಕ್ರಮ ಸಾಗಾಣಿಕೆ ಮಾಡಿ ಸಾರ್ವಜನಿಕ ಆಸ್ತಿ ಪಾಸ್ತಿಗೆ ನಷ್ಟವುಂಟು ಮಾಡುತ್ತಿದ್ದು, ಈತನ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸುವ ಸಲುವಾಗಿ ಪೊಲೀಸ್ ಠಾಣಾ ಅಧಿಕಾರಿಗಳು ನೀಡಿರುವ ವರದಿಯು ಆರೋಪಿಯ ವಿರುದ್ಧ ಅನೇಕ ಪ್ರಕರಣಗಳು ದಾಖಲಾಗಿರುವುದು ಕಂಡು ಬರುತ್ತದೆ.

ಆರೋಪಿಯ ವರ್ತನೆಯು ಭಾರತೀಯ ದಂಡ ಪ್ರಕ್ರಿಯೆ ಸಂಹಿತೆ ಕಲಂ. 107 ರಡಿಯಲ್ಲಿ ರೂಢಿಗತವಾದ ಆರೋಪ ಮಾಡಿರುವುದು ಹಾಗೂ ರಾಮನಗರ ಜಿಲ್ಲೆಯ ಸುತ್ತಮುತ್ತಲೂ ರೌಡಿಯಾಗಿ ಸಾರ್ವಜನಿಕರನ್ನು ಬೆದರಿಸುವುದು, ಸಾರ್ವಜನಿಕರ ಆಸ್ತಿ ಪಾಸ್ತಿಯನ್ನು ಹಾನಿ ಉಂಟು ಮಾಡುವ ಹಾಗೂ ಕೊಲೆ ಬೆದರಿಕೆ, ದರೋಡೆಗೆ ಹೊಂಚು ಹಾಕಿರುವುದು ಕಂಡು ಬಂಇದ್ದು, ಈತನಿಂದ ಪ್ರಕ್ಷುಬ್ಧ ಪರಿಸ್ಥಿತಿ ಉಂಟಾಗಿ ಶಾಂತಿಭಂಗವಾಗುವ ಸಂದರ್ಭವು ಕಂಡು ಬಂದಿರುವುದರಿಂದ ಮುಂಬರುವ ಸಾರ್ವತ್ರಿಕ ಚುನಾವಣೆಯನ್ನು ಗಮನದಲ್ಲಿ ಇರಿಸಿಕೊಂಡು ಈತನನ್ನು ಗಡಿಪಾರು ಮಾಡಲಾಗಿದೆ.

9. ಚಾನ್‌ಪಾಷ ಬಿನ್ ಅಮೀರ್ ಜಾನ್, 40 ವರ್ಷ, ವಕೀಲರು, ಯಾಕೂಬ್ ಖಾನ್ ಸರ್ಕಲ್, ಐಜೂರು, ರಾಮನಗರ ಟೌನ್, ರಾಮನಗರ ಜಿಲ್ಲೆ ಇವರು ಮುಂಬರುವ ಲೋಕಸಭಾ ಚುನಾವಣೆಯ ಕಾರ್ಯನಿರ್ವಹಣೆಗಳು ಸುಗಮವಾಗಿ ನಿರ್ವಹಣೆಯಾಗದಂತೆ ತೊಳಕುಂಟು ಮಾಡಿ ಕಾನೂನು ಬಾಹಿರ ದೃಷ್ಟತ್ವಗಳನ್ನು ನಡೆಸಿ ಸಾರ್ವಜನಿಕ ಶಾಂತಿಭಂಗ, ಮಾನಹಾನಿ, ಪ್ರಾಣಹಾನಿ ಹಾಗೂ ಕೋಮು ಸೌಹಾರ್ದತೆ ಕದಡುವ ಸಾಧ್ಯತೆ ಇರುತ್ತದೆ ಆದ್ದರಿಂದ ಇವರಿಂದ ಸಂಭವಿಸಬಹುದಾದ ಕಾನೂನು ಬಾಹೀರ ದೃಷ್ಟತ್ವಗಳನ್ನು ನಿಯಂತ್ರಿಸುವ ಸಲುವಾಗಿ ಹಾಗೂ ಇವರ ಅಕ್ರಮ ಚಟುವಟಿಕೆಗಳನ್ನು ಮಾಡದಂತೆ ನಿಯಂತ್ರಿಸಲು ಕರ್ನಾಟಕ ಪೊಲೀಸ್ ಅಧಿನಿಯಮ 1963 ಕಲಂ 55ರ (ಎ)(ಬಿ) ರಡಿಯಲ್ಲಿ ಹಾಗೂ ಇತ್ತೀಚೆಗೆ ಆರೋಪಿ/ಪ್ರತಿವಾದಿಯು ಅವರ ಫೇಸ್‌ಬುಕ್ ಖಾತೆಯಲ್ಲಿ ಜ್ಞಾನವ್ಯಾಪಿ ಮಸೀದಿಗೆ ಸಂಬಂಧಪಟ್ಟಂತೆ ಉತ್ತರ ಪ್ರದೇಶದ ವಾರಣಾಸಿ ಜಿಲ್ಲಾ ನ್ಯಾಯಾಲಯದಲ್ಲಿ ನೀಡಿದಂತಹ ಆದೇಶದ ವಿರುದ್ಧ ಭಾರತ ನ್ಯಾಯಾಂಗ ವ್ಯವಸ್ಥೆಗೆ ಮತ್ತು ನ್ಯಾಯಾಲಯದ ಪ್ರಕ್ರಿಯೆಗೆ ಹಾಗೂ ನ್ಯಾಯಾಧೀಶರ ಹುದ್ದೆಗೆ ದಕ್ಕೆ ಬರುವ ರೀತಿಯಲ್ಲಿ ಪ್ರಕಟಣೆಯು ಮಾಡಿರುವುದು ಕೋಮು ಸೌಹಾರ್ದತೆಯನ್ನು ಕದಲಿಸಲು ಕಾರಣರಾಗಿರುತ್ತಾರೆ. ಮುಂಬರುವ ಸಾರ್ವತ್ರಿಕ ಚುನಾವಣೆ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವ ಸಂದರ್ಭವಿದ್ದು ಆರೋಪಿ ವಿರುದ್ಧ ದಾಖಲಾಗಿರುವ ಪ್ರಕರಣಗಳು ಸೂಕತೆಯಿಂದ ಕೂಡಿರುವುದರಿಂದ ಈ ಆರೋಪಿಯ ವರ್ತನೆಯು ಭಾರತೀಯ ದಂಡ ಪ್ರಕ್ರಿಯೆ ಸಂಹಿತೆ ಕಲಂ. 107 ರಡಿಯಲ್ಲಿ ರೂಢಿಗತವಾದ ಆರೋಪ ಮಾಡಿರುವುದು ಕಂಡು ಬಂದಿದ್ದು, ಇವರಿಂದ ಪ್ರಕ್ಷುಬ್ಧ ಪರಿಸ್ಥಿತಿ ಉಂಟಾಗಿ ಶಾಂತಿಭಂಗವಾಗಿರುವ ಸಂದರ್ಭವು ಕಂಡು ಬಂದಿರುವುದಿಂದ ಮುಂಬರುವ ಸಾರ್ವತ್ರಿಕ ಚುನಾವಣೆಯನ್ನು ಗಮನದಲ್ಲಿ ಇರಿಸಿಕೊಂಡು ಇವರನ್ನು ಗಡಿಪಾರು ಮಾಡಿ ಜಿಲ್ಲಾಧಿಕಾರಿಗಳು ಹಾಗೂ ಚುನಾವಣಾಧಿಕಾರಿಗಳು ಆದೇಶಿಸಿದ್ದಾರೆ.

ಗ್ಯಾರಂಟಿಯಿಂದ ಮಂಕುಬೂದಿ ರಾಜಕೀಯ: ಜೆಡಿಎಸ್ ತಾಲೂಕು ಅಧ್ಯಕ್ಷೆ ಶೋಭಾ

■ ಕಾಯಕಯೋಗಿ ಸುದ್ದಿ



ಕನಕಪುರ: ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಕಾಸು ಇಲ್ಲದೆ ಯಾವ ಕೆಲಸ ಆಗುತ್ತಿಲ್ಲ, ಸರ್ಕಾರಿ ಕಚೇರಿಗಳಲ್ಲಿ ಭ್ರಷ್ಟಾಚಾರ ತಾಂಡ ವಾಡುತ್ತಿದ್ದು ಕಾಂಗ್ರೆಸ್ ಸರ್ಕಾರ ಮುಂದುವರೆದರೆ ಜನಸಾಮಾನ್ಯರ ಸ್ಥಿತಿ ಭಯ ಆಗುತ್ತದೆ, ಅಧಿಕಾರದಲ್ಲಿರುವ ಎಲ್ಲರೂ ಹಣ ಹೊಡೆದು ಜೇಬು ತುಂಬಿಸಿಕೊಳ್ಳುವುದು ಬಿಟ್ಟರೆ ಪರಿಸ್ಥಿತಿ ಜನಸಾಮಾನ್ಯರ ಬಗ್ಗೆ ಯೋಚಿಸುವವರು ಇಲ್ಲದಂತಾಗಿದ್ದಾರೆ ಎಂದು ಶೋಭಾ ಆತಂಕ ವ್ಯಕ್ತಪಡಿಸಿದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆಬಂದಿದ್ದೇ ಬರ ಆವರಿಸಿಕೊಂಡಿತು.

ಜನ ಕುಡಿಯುವ ನೀರಿಗೂ ಹಾಹಾಕಾರ ಪಡುವಂತಹ ಪರಿಸ್ಥಿತಿ ಬಂದೊದಗಿದೆ. ಆದರೂ ಗಟ್ಟಿ ಚರ್ಮದ ಸರ್ಕಾರ ಜನರ ಸಮಸ್ಯೆಗಳ ಬಗ್ಗೆ ಒಂದಿಷ್ಟು ತಲೆಕೆಡಿಸಿಕೊಳ್ಳುತ್ತಿಲ್ಲ ಕೇವಲ ಗ್ಯಾರಂಟಿ ಯೋಜನೆಗಳೆಂಬ ಮಂಕು ಬೂದಿ ಜನರ ಮುಖಕ್ಕೆ ಎರಚಿ ರಾಜಕೀಯ ಮಾಡುತ್ತಿದ್ದಾರೆ, ರಾಜ್ಯದ ಜನ ಈಗ ತುಂಬಾ ಕ್ಲಿಷ್ಟಕರಪರಿಸ್ಥಿತಿಯಲ್ಲಿದ್ದಾರೆ. ಜನರ ಸಮಸ್ಯೆಗಳ ಬಗ್ಗೆ ಒಂಚೂರು ಅರಿತು ಕೊಳ್ಳುವ ಕೆಲಸಕ್ಕೆ ಮುಖ್ಯಮಂತ್ರಿಗಳು ಹೋಗುತ್ತಿಲ್ಲ, ರಾಜ್ಯದಲ್ಲಿ ಹೀಗೆ ಮುಂದುವರೆದರೆ ಜನ ಬದುಕುವುದಾದರೂ ಹೇಗೆ ಎಂದು ಪ್ರಶ್ನಿಸಿದರು.

ಬಿಜೆಪಿ ಸರ್ಕಾರ ತಿರಸ್ಕರಿಸಲು ದಸಂಸ ಕರೆ

■ ಕಾಯಕಯೋಗಿ ಸುದ್ದಿ

ಪಿರಿಯಾಪಟ್ಟಣ: ಕಲ್ಯಾಣ ರಾಜ್ಯ ಕಲ್ಪನೆಯನ್ನು ಹಂತ ಹಂತವಾಗಿ ಕಡಿತ ಮಾಡುತ್ತಿರುವ ಮೋದಿ ನೇತೃತ್ವದ ಬಿಜೆಪಿ ಸರ್ಕಾರವನ್ನು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ತಿರಸ್ಕರಿಸುವಂತೆ ತಿರಸ್ಕರಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಗಳ ಐಕ್ಯ ಹೋರಾಟ ಚಾಲನಾ ಸಮಿತಿ ರಾಜ್ಯ ಸಂಚಾಲಕರಾದ ಇಂದೂಧರ ಹೊನ್ನಾಪುರ ಕರೆ ನೀಡಿದರು.



ಪಟ್ಟಣದ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ತಮ್ಮ ವಿರುದ್ಧ ಮಾತನಾಡುವ ಪತ್ರಕರ್ತರು ಹಾಗು ಹೋರಾಟಗಾರರನ್ನು ಜೈಲಿಗಟ್ಟುತ್ತಿರುವ ಮೋದಿ ಸರ್ಕಾರ ಒಕ್ಕೂಟ ವ್ಯವಸ್ಥೆಯನ್ನು ಹಾಳುಗೆಡುವುತ್ತಿದೆ, ಕೃಷಿ ಸಹಕಾರ ಶಿಕ್ಷಣ ಕಾಯ್ದೆ ಮಾಡುವ ಅಧಿಕಾರವನ್ನು ರಾಜ್ಯ ಸರ್ಕಾರದಿಂದ ಕಿತ್ತುಕೊಳ್ಳುವ ಮೂಲಕ ಸಂವಿಧಾನದ ಆಶಯಗಳನ್ನು ನಾಶ ಮಾಡುತ್ತಿದೆ, ಬಡವರು ಎಷ್ಟು ಸಂಖ್ಯೆಯಲ್ಲಿದ್ದಾರೆ ಎನ್ನುವುದು ತಿಳಿದರೆ ಅವರಿಗೆ ಯೋಜನೆಗಳನ್ನು ರೂಪಿಸಬೇಕಾಗುತ್ತದೆ ಎಂಬ ದುರುದ್ದೇಶದಿಂದ ಅದಕ್ಕಾಗಿ ಸ್ಥಾಪಿಸಿದ್ದ ಸ್ಯಾಂಪಲ್ ಸರ್ವೆ ಆಫ್ ಇಂಡಿಯಾ ಸಂಸ್ಥೆಯನ್ನು ಮುಚ್ಚಿ ಹಾಕಲಾಗಿದೆ, ದೇಶದ ಅತ್ಯಂತ ಭ್ರಷ್ಟರು ಬಿಜೆಪಿ ಪಕ್ಷದಲ್ಲಿದ್ದಾರೆ, ದಲಿತ ಚಳುವಳಿ ಕಾಂಗ್ರೆಸ್ ವಿರೋಧಿಸಿ ಹುಟ್ಟಿದ ಚಳುವಳಿಯಾಗಿದ್ದು ನಿರಂತರವಾಗಿ ಹೋರಾಟ ಮಾಡಿಕೊಂಡೇ ಬಂದಿದ್ದೇವೆ ಈ ಹಿಂದೆ ಜೆಡಿಎಸ್ ಗೆ ಸಹ ನಾವು ಬೆಂಬಲ ನೀಡಿದ್ದೆವು ಈಗ ಕಾಂಗ್ರೆಸ್ ಜನಪರ ನಿಲುವು ಹೊಂದಿರುವುದರಿಂದ ಈ ಬಾರಿ ಕಾಂಗ್ರೆಸ್ ಬೆಂಬಲಿಸುತ್ತಿದ್ದೇವೆ ಎಂದು ಸ್ಪಷ್ಟಪಡಿಸಿದರು. ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಗುರು ಪ್ರಸಾದ್ ಕೆರಗೋಡು ಅವರು ಮಾತನಾಡಿ ಯದುವೀರ್ ತಪ್ಪು ನಿರ್ಧಾರದಿಂದ ತಪ್ಪಾದ ಪಕ್ಷವನ್ನು ಆಯ್ಕೆ ಮಾಡಿಕೊಂಡಿದ್ದಾರೆ ನಾವು ನಾಲ್ವಡಿ ಕೃಷ್ಣರಾಜ ಒಡೆಯರ್ ಕೊಡುಗೆಯನ್ನು ಸ್ಮರಿಸಿದರೂ ಕೋಮುವಾದಿ ಪಕ್ಷ ಒಪ್ಪಿಕೊಂಡಿರುವ ಯದುವೀರ್ ಅವರನ್ನು ಸೋಲಿಸಬೇಕಾದ ಅನಿವಾರ್ಯ ಪರಿಸ್ಥಿತಿಯಿದೆ ಎಂದರು.

ದಲಿತ ಸಂಘರ್ಷ ಸಮಿತಿ ರಾಜ್ಯ ಸಂಯೋಜಕ ವಿ.ನಾಗರಾಜ್ ಅವರು ಮಾತನಾಡಿ ದೇಶದಲ್ಲಿ ಅಘೋಷಿತ ತುರ್ತು ಪರಿಸ್ಥಿತಿ ನಿರ್ಮಾಣವಾಗಿದ್ದು ಕಾರ್ಪೊರೇಟ್ ವಲಯದ 25 ಲಕ್ಷ ಕೋಟಿ ಸಾಲ ಮನ್ನ ಮಾಡಿರುವ ಬಿಜೆಪಿ ಸರ್ಕಾರ ಬಡವರಿಗೆ ಗ್ಯಾರಂಟಿ ಯೋಜನೆ ನೀಡಿರುವ ಕಾಂಗ್ರೆಸ್ ಸರ್ಕಾರವನ್ನು ಟೀಕಿಸುವ ಮೂಲಕ ನಾವು ಶ್ರೀಮಂತರ ಪರ ಎಂಬುದನ್ನು ಸಾಬೀತು ಮಾಡಿದೆ ಎಂದರು.ಸುದ್ದಿಗೋಷ್ಠಿಯಲ್ಲಿ ದಸಂಸ ಜಿಲ್ಲಾ ಸಂಚಾಲಕ ಆಲಗೋಡು ಶಿವಕುಮಾರ್, ದಸಂಸ ಮುಖಂಡರಾದ ಆರ್.ಎಸ್ ದೊಡ್ಡಣ್ಣ, ಡಾ.ಸೋಮಣ್ಣ, ಪಿ.ಮಹದೇವ್, ಬಾಳೆಕಟ್ಟೆ ರಾಜಯ್ಯ, ಕೊಣಸೂರು ಮೂರ್ತಿ, ಸತ್ಯನಾರಾಯಣ್ ಸೇರಿದಂತೆ ಹಲವು ಮುಖಂಡರಿದ್ದರು.

ಡಾ.ಮಂಜುನಾಥ್ ಪರ ಜೆಡಿಎಸ್ ಕಾರ್ಯಕರ್ತರಿಂದ ಮತಯಾಚನೆ

■ ಕಾಯಕಯೋಗಿ ಸುದ್ದಿ

ಕನಕಪುರ: ನರೇಂದ್ರ ಮೋದಿಯವರನ್ನು ಪ್ರಧಾನಿ ಮಾಡಲು ಕ್ಷೇತ್ರದ ಮತದಾರಾರು ಬಿಜೆಪಿ ಅಭ್ಯರ್ಥಿ ಸಿಎನ್ ಮಂಜುನಾಥ್ ಅವರನ್ನು ಬೆಂಬಲಿಸಿ ಎಂದು ರಾಜ್ಯ ಜೆಡಿಎಸ್ ಯುವ ಉಪಾಧ್ಯಕ್ಷ ಚಿನ್ನಸ್ವಾಮಿ ಹೇಳಿದರು.

ನಗರದ ಹತ್ತನೇ ವಾರ್ಡಿನ ರಾಘವೇಂದ್ರ ಕಾಲೋನಿ ,ಲಕ್ಷ್ಮಣ ಲೇಔಟ್, ಕುರುಪೇಟೆ ,ಕೆರೆಬೀದಿ ಏರಿಯಾಗಳಲ್ಲಿ ಬಿಜೆಪಿ ಅಭ್ಯರ್ಥಿ ಡಾ "ಸಿ .ಎನ್ ಮಂಜುನಾಥ್ ಪರ ಮನೆ ಮನೆ ಮತಯಾಚನೆ ಮಾಡಿ ಮಾತನಾಡಿದ ಅವರು ಬಿಜೆಪಿ ಅಭ್ಯರ್ಥಿ ಸಿ ಎನ್ ಮಂಜುನಾಥ್ ಅವರು ಒಬ್ಬ ಸಾಮಾನ್ಯ ಕಾರ್ಯಕರ್ತನ್ನಾಗಿ ಕೆಲಸ ಮಾಡುತ್ತಿದ್ದಾರೆ. ಸದಾ ನಿಮ್ಮೊಂದಿಗೆ ಬೆರೆತು ಕ್ಷೇತ್ರದ ಅಭಿವೃದ್ಧಿಗೆ ದುಡಿಯುವ ವ್ಯಕ್ತಿಯಾಗಿದ್ದಾರೆ.

ನರೇಂದ್ರ ಮೋದಿಯವರ 10 ವರ್ಷದ ಜನಪರ ಕಾರ್ಯಕ್ರಮಗಳನ್ನು ಪ್ರತಿ ಹಳ್ಳಿ ಹಳ್ಳಿಗೂ ತಲುಪಿಸುವುದು ಕಾರ್ಯಕರ್ತರ ಜವಾಬ್ದಾರಿಯಾಗಿದೆ. ರಾಜ್ಯ ಸರ್ಕಾರದಿಂದ ರಾಜ್ಯದ ಅಭಿವೃದ್ಧಿಯಲ್ಲಿ ಶೂನ್ಯವಾಗಿದೆ ಕರ್ನಾಟಕದಲ್ಲಿ ಮೋದಿ ಅಲೆಯಿಂದ ಗ್ಯಾರಂಟಿ ಯ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-6 | 21-04-2024

ಬೆಂಗಳೂರು

ಸಂವಿಧಾನ ರಕ್ಷಿಸಲು ಕಾಂಗ್ರೆಸ್ ಬೆಂಬಲಿಸಿ-ಚಲುವರಾಯಸ್ವಾಮಿ

ಮಂಡ್ಯ: ಕಾಂಗ್ರೆಸ್ ಪಕ್ಷ ಎಲ್ಲಾ ಜಾತಿ ಮತ್ತು ಸಮುದಾಯಕ್ಕೆ ಒಳಿತು ಮಾಡುವ ಪಕ್ಷವಾಗಿದ್ದು ಕೇಂದ್ರ ಹಾಗೂ ರಾಜ್ಯದಲ್ಲಿ ಅಧಿಕಾರದಲ್ಲಿದ್ದ ವೇಳೆ ಜಾತ್ಯಾತೀತ ಹಾಗೂ ಧರ್ಮಾತೀತವಾಗಿ ಯೋಜನೆಗಳನ್ನೂ ಜಾರಿಗೊಳಿಸಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ನಗರದ ಪತ್ರಕರ್ತರ ಸಂಘದಲ್ಲಿ ಆಯೋಜನೆಗೊಂಡಿದ್ದ ಮಾದಿಗ ಸಮುದಾಯದ ಮುಖಂಡ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಎಡಗೈ ಮತ್ತು ಬಲಗೈ ಎಂಬ ಅಪಸ್ವರ ತೆಗೆದು, ಸಂವಿಧಾನ ರಕ್ಷಿಸಲು ಕಾಂಗ್ರೆಸ್ ಪಕ್ಷ ಬೆಂಬಲಿಸಬೇಕೆಂದು ಕರೆ ನೀಡಿದರು.

ಜೆಡಿಎಸ್ ಹಾಗೂ ಬಿಜೆಪಿ ಒಂದೇ ನಾಣ್ಯದ ಎರಡು ಮುಖಗಳಾಗಿದ್ದು, ಅಧಿಕಾರದಲ್ಲಿದ್ದಾಗ ಸಾಧನೆ ಮಾಡಲಾಗದೇ ಅಧಿಕಾರವಿಲ್ಲದಾಗ ಅಲವತ್ತುಗೊಳ್ಳುತ್ತಾರೆ. ಜಿಲ್ಲೆಯನ್ನು ಅಭಿವೃದ್ಧಿ ಮಾಡುವ ಚಿಂತನೆ ಮೈತ್ರಿ ಪಕ್ಷಗಳ ನಾಯಕರಲ್ಲಿಲ್ಲ 14 ತಿಂಗಳ ಕಾಲ ಅಧಿಕಾರದಲ್ಲಿದ್ದಾಗ ಜಿಲ್ಲೆ ಹಾಗೂ ಯಾವುದೇ ಜನಾಂಗಕ್ಕೆ ಕುಮಾರಸ್ವಾಮಿ ಕೊಡುಗೆ ಏನೆಂದು ಪ್ರಶ್ನಿಸಿದರು.

ಮಾದಿಗ ಸಮುದಾಯದ ಅಭಿವೃದ್ಧಿಗೆ ಬೇಕಾದ ಸಹಕಾರ ಮಾಡುವ ಜೊತೆಗೆ ಮುಂದಿನ ದಿನಗಳಲ್ಲಿ ಸರ್ಕಾರ ನಾಮನಿರ್ದೇಶನದಲ್ಲಿ ಜನಾಂಗಕ್ಕೆ ನ್ಯಾಯ ಕಲ್ಪಿಸಲಾಗುತ್ತದೆ. ಸಮಾಜದ ಎಲ್ಲಾ ಬಂಧುಗಳು ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಗೆಲುವಿಗೆ ಸಹಕರಿಸಬೇಕೆಂದರು.

ಶಾಸಕ ರಮೇಶ್ ಬಂಡಿಸಿದ್ದೇಗೌಡ ಮಾತನಾಡಿ, ಶ್ರೀರಂಗಪಟ್ಟಣದಲ್ಲಿ ಹಿಂದಿನ ಸಿದ್ದರಾಮಯ್ಯ ಸರ್ಕಾರದಲ್ಲಿ ಮಂಜೂರಾಗಿದ್ದ ಬಾಬು ಜಗಜೀವನ್ ರಾಂ ಕಟ್ಟಡ ಪೂರ್ಣಗೊಳಿಸಲು ಬದ್ಧನಾಗಿದ್ದೇನೆ ಹಾಗೂ ಜನಾಂಗದ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತೇನೆ. ಇದಕ್ಕಾಗಿ ಪಕ್ಷದ ಅಭ್ಯರ್ಥಿ ಬೆಂಬಲಿಸಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ ಶಾಸಕ ರವಿಕುಮಾರ್ ಗೌಡ, ಬಾಬು ಜಗಜೀವನ ರಾಂ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಎನ್.ಆರ್.ಚಂದ್ರಶೇಖರ್, ಹನಿಯಂಬಾಡಿ ಶೇಖರ್ ಮುಖಿತರದರು ಉಪಸ್ಥಿತರಿದ್ದರು.

ಡಾ.ಕೆ.ಸುಧಾಕರ್ ಅವರಿಗೆ ದೊಡ್ಡ ಗೆಲುವು ತಂದುಕೊಡಬೇಕು: ಮೋದಿ

ಚಿಕ್ಕಬಳ್ಳಾಪುರ/ದೇವನಹಳ್ಳಿ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸುತ್ತಿರುವ ಎನ್‌ಡಿಎ ಅಭ್ಯರ್ಥಿ ಡಾ.ಕೆ.ಸುಧಾಕರ್ ಅವರಿಗೆ ದೊಡ್ಡ ಗೆಲುವು ತಂದುಕೊಡಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಬಿಜೆಪಿ-ಜೆಡಿಎಸ್ ಕಾರ್ಯಕರ್ತರಿಗೆ ಮತ್ತು ಜನರಿಗೆ ಮನವಿ ಮಾಡಿದ್ದಾರೆ. ಈ ಕರೆಯಿಂದಾಗಿ ಕ್ಷೇತ್ರದ ಎಲ್ಲ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರಲ್ಲಿ ಹೊಸ ಹುರುಪು ಉಂಟಾಗಿದೆ.

ಚೊಕ್ಕಹಳ್ಳಿಯಲ್ಲಿ ನಡೆದ ವಿಜಯ ಸಂಕಲ್ಪ ಸಮಾವೇಶವು ಅತಿ ಹೆಚ್ಚು ಸಂಖ್ಯೆಯ ಜನರು ಹಾಗೂ ಕಾರ್ಯಕರ್ತರ ಪಾಲ್ಗೊಳ್ಳುವಿಕೆಯಿಂದಾಗಿ ಯಶಸ್ವಿಯಾಯಿತು. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಿಂದ ಅತಿ ಹೆಚ್ಚು ಸಂಖ್ಯೆಯಲ್ಲಿ ಜನರು ಹಾಗೂ ಕಾರ್ಯಕರ್ತರು ಬಂದಿದ್ದು, ಡಾ.ಕೆ.ಸುಧಾಕರ್ ಅವರಿಗೆ ದೊರೆತ ಸ್ಪಷ್ಟ ಬೆಂಬಲವನ್ನು ಇದು ಪ್ರತಿಬಿಂಬಿಸಿತ್ತು.

ಚೊಕ್ಕಹಳ್ಳಿಯಲ್ಲಿ ಜನಸ್ತೋಮವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಎಲ್ಲರ ಸೋದರ ಸೋದರಿಯರು ಏಪ್ರಿಲ್ 26 ರಂದು ಮತದಾನದಲ್ಲಿ ತಪ್ಪದೇ ಪಾಲ್ಗೊಳ್ಳಬೇಕೆಂದು ವಿಶೇಷವಾಗಿ ಮನವಿ ಮಾಡುತ್ತೇನೆ. ಚಿಕ್ಕಬಳ್ಳಾಪುರದಿಂದ ಡಾ.ಕೆ.ಸುಧಾಕರ್ ಮತ್ತು ಕೋಲಾರ ಕ್ಷೇತ್ರದಿಂದ ಮಲ್ಲೇಶ್ ಬಾಬು ಅವರಿಗೆ ದೊಡ್ಡ ಗೆಲುವು ತಂದುಕೊಡಬೇಕು. ಕಾರ್ಯಕರ್ತರು ಪ್ರತಿ ಮನೆಮನೆಗೆ ಹೋಗಿ, ಮೋದಿಜಿ ಬಂದಿದ್ದರು ಮತ್ತು ನಿಮ್ಮೆಲ್ಲರಿಗೂ ತಮ್ಮ



ನಮಸ್ಕಾರ ತಿಳಿಸಿದ್ದಾರೆ ಎಂದು ಹೇಳಬೇಕು ಎಂದರು.

ಸಂತ ಕೈವಾರ ತಾತಯ್ಯ ಹಾಗೂ ಸರ್ ಎಂ.ವಿಶ್ವೇಶರಯ್ಯನವರ ಈ ಭೂಮಿಯಲ್ಲಿ ಜನರನ್ನು ದರ್ಶನ ಮಾಡಿರುವುದು ನನ್ನ ಸೌಭಾಗ್ಯ. ಚಿಕ್ಕಬಳ್ಳಾಪುರ ಹಾಗೂ ಕೋಲಾರ 'ಮತ್ತೊಮ್ಮೆ ಮೋದಿ ಸರ್ಕಾರ' ಎಂಬ ಸಂದೇಶವನ್ನು ಈಗಾಗಲೇ ನೀಡಿದೆ. ನಾನು ನನ್ನ ರಿಪೋರ್ಟ್ ಕಾರ್ಡ್ ಜೊತೆಗೆ ಜನರ ಆಶೀರ್ವಾದ ಕೇಳಲು ಬಂದಿದ್ದೇನೆ. ನಾನು ಜನರನ್ನೇ ನನ್ನ ಕುಟುಂಬ ಎಂದು ನಂಬಿದ್ದೇನೆ. ಜನರಿಗಾಗಿ ಸೇವೆ ಸಲ್ಲಿಸುವಲ್ಲಿ ಯಾವುದೇ ಕೊರತೆ ಮಾಡಿಲ್ಲ. ನಾನು ಯೋಜನೆ ಮಾತ್ರ ನೀಡಿಲ್ಲ, ಗ್ಯಾರಂಟಿ ಕೂಡ ನೀಡಿದ್ದೇನೆ. ಚಿಕ್ಕಬಳ್ಳಾಪುರದಲ್ಲಿ 4 ಲಕ್ಷಕ್ಕೂ ಅಧಿಕ ಆಯುಷ್ಮಾನ್ ಕಾರ್ಡ್ ನೀಡಿದ್ದು, ಇನ್ನು 70 ವರ್ಷದ ಮೀರಿದ ಹಿರಿಯ ನಾಗರಿಕರಿಗೂ 5 ಲಕ್ಷ ರೂ. ವರೆಗಿನ ಉಚಿತ ಚಿಕಿತ್ಸೆ ದೊರೆಯಲಿದೆ ಎಂದರು.

ಎನ್‌ಡಿಎ ಸರ್ಕಾರ ನಮೋ ಡ್ರೋಣ್ ದೀದಿ ಯೋಜನೆಯಡಿ ಹೆಣ್ಣುಮಕ್ಕಳಿಗೆ ಡ್ರೋಣ್ ಬಳಸುವ ತರಬೇತಿ ನೀಡಲಾಗುತ್ತಿದೆ. ಚಿಕ್ಕಬಳ್ಳಾಪುರ ಹಾಗೂ ಕೋಲಾರದ ಹೆಣ್ಣುಮಕ್ಕಳು ಡ್ರೋಣ್ ತಂತ್ರಜ್ಞಾನ ಬಳಸುವ ದಿನ ದೂರವಿಲ್ಲ. ಶ್ರೀಅನ್ನಕ್ಕೆ ಪ್ರೋತ್ಸಾಹ ನೀಡಿದ್ದು, ಸಿರಿಧಾನ್ಯಗಳಿಗೆ ಉತ್ತೇಜನ ನೀಡಲಾಗುತ್ತಿದೆ. ಇದರಿಂದ ಚಿಕ್ಕಬಳ್ಳಾಪುರ-ಕೋಲಾರ ಭಾಗದ ರೈತರಿಗೂ ಆದಾಯ ಹೆಚ್ಚಲಿದೆ. ಈ ಭಾಗದಲ್ಲಿ ನೀರಿನ ಸಮಸ್ಯೆ ಪರಿಹರಿಸಲು 150 ಅಮೃತ ಸರೋವರ ರೂಪಿಸಲಾಗಿದೆ. ಈ ಭಾಗದಲ್ಲಿ 2.70 ಲಕ್ಷ ಜನರಿಗೆ ಕೊಳಾಯಿ ನೀರಿನ ಸೌಲಭ್ಯ ಕಲ್ಪಿಸಲಾಗಿದೆ. ಇಲ್ಲಿ ನಂದಿ ಬೆಟ್ಟವಿದೆ, ತಾಯಿ ಭುವನೇಶ್ವರಿ, ತಾಯಿ ಕೋಲಾರಮ್ಮನ ಅನುಗ್ರಹವೂ ಇದೆ. ಈ ಸ್ಥಳಗಳನ್ನು ನಮ್ಮ ಸರ್ಕಾರ ತೀರ್ಥಕ್ಷೇತ್ರಗಳಾಗಿ, ವೀಕೆಂಡ್ ಗೇಟ್‌ವೇ ಆಗಿ ಮಾಡಲಾಗುವುದು ಎಂದು ಭರವಸೆ ನೀಡಿದರು.

ಡಾ.ಕೆ.ಸುಧಾಕರ್‌ಗೆ ಮತ ನೀಡಿ

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಮಾತನಾಡಿ, ಮನಮೋಹನ್ ಸಿಂಗ್ ಸರ್ಕಾರ ಹತ್ತು ವರ್ಷ ದೇಶ ಆಳಿ ಚೊಂಬು ನೀಡಿದೆ. 2ಜಿ ಸೇರಿದಂತೆ ಅನೇಕ ಭ್ರಷ್ಟಾಚಾರ ನಡೆದಿದ್ದು, ದೇಶದ ಸಂಪತ್ತನ್ನು ಕೊಳ್ಳೆ ಹೊಡೆದು ಖಾಲಿ ಚೊಂಬನ್ನು ಜನರಿಗೆ ನೀಡಿದ್ದಾರೆ. ಪಿಳ್ಳಪ್ಪನವರ ಮಗ ಬಿಜೆಪಿಗೆ ಬೆಂಬಲಿಸಲ್ಲ ಎಂದಿದ್ದಾರೆ. ಆದರೆ ಅವರ ತಂದೆಯನ್ನು ಚುನಾವಣೆಯಲ್ಲಿ ಒಂದು ರೂಪಾಯಿ ಖರ್ಚು ಮಾಡದೆ ಗೆಲ್ಲಿಸಿದ್ದು ಇದೇ ದೇವೇಗೌಡ. ನೀವು ನಿಜವಾದ ಕಾರ್ಯಕರ್ತರಾಗಿದ್ದರೆ ನನ್ನ ಆದೇಶದಂತೆ ಡಾ.ಕೆ.ಸುಧಾಕರ್ ಅವರಿಗೆ ಮತ ನೀಡಿ ಎಂದರು.

ಡಾ.ಕೆ.ಸುಧಾಕರ್ ಮತ್ತು ಮಲ್ಲೇಶ್ ಅವರನ್ನು ದೆಹಲಿಗೆ ಕಳುಹಿಸೋಣ. ನಂತರ ಚಿಕ್ಕಬಳ್ಳಾಪುರ ಮತ್ತು ಕೋಲಾರದ ಕುಡಿಯುವ ನೀರಿನ ಬವಣೆ ಬಗೆಹರಿಸಿ ಎಂದು ಕೇಳೋಣ. ಆ ಶಕ್ತಿಯನ್ನು ಜನರು ನೀಡಬೇಕು ಎಂದು ಮನವಿ ಮಾಡಿದರು.

ನಂದಿ ವಿಗ್ರಹ ಸಮರ್ಪಣೆ

ಚಿಕ್ಕಬಳ್ಳಾಪುರ ನಂದಿ ಬೆಟ್ಟ ಹಾಗೂ ಭೋಗನಂದೀಶ್ವರ ದೇವಸ್ಥಾನಕ್ಕೆ ಜನಪ್ರಿಯವಾಗಿದೆ. ಶಿವಭಕ್ತರಾದ ನರೇಂದ್ರ ಮೋದಿಯವರಿಗೆ ಅಭ್ಯರ್ಥಿ ಡಾ.ಕೆ.ಸುಧಾಕರ್ ನಂದಿ ವಿಗ್ರಹವನ್ನು ಕೊಡುಗೆಯಾಗಿ ನೀಡಿ ಗೌರವಿಸಿದರು.

ಬಹಿಷ್ಕಾರ ಮನೆಯಲ್ಲಿ ಸಾವು...ಅಂತ್ಯಸಂಸ್ಕಾರಕ್ಕೆ ಪರದಾಡಿದ ಪೋಷಕರು...

ನಂಜನಗೂಡು: ಬಹಿಷ್ಕಾರಕ್ಕೆ ಒಳಗಾದ ಕುಟುಂಬದಲ್ಲಿ ಸಾವನ್ನಪ್ಪಿದ ಅಂಗವಿಕಲ ಯುವಕನ ಅಂತ್ಯಸಂಸ್ಕಾರಕ್ಕೆ ಪೋಷಕರು ಪರದಾಡಿದ ಅಮಾನವೀಯ ಘಟನೆ ರಾಜ್ಯದ ಮುಖ್ಯಮಂತ್ರಿಯ ತವರು ಜಿಲ್ಲೆ ಮೈಸೂರಿನ ನಂಜನಗೂಡು ತಾಲ್ಲೂಕಿನ ತರಗನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಯುವಕನ ಅಂತ್ಯಸಂಸ್ಕಾರಕ್ಕೆ ಗ್ರಾಮದಲ್ಲಿ ಅವಕಾಶ ನೀಡದ ಹಿನ್ನಲೆ ಜಿಲ್ಲಾಧಿಕಾರಿಗಳು ಮಧ್ಯಪ್ರವೇಶಿಸಿ ಮೃತದೇಹಕ್ಕೆ ಮುಕ್ತಿ ದೊರಕಿಸಿದ್ದಾರೆ. ಜಿಲ್ಲಾಧಿಕಾರಿಗಳ ಮೌಖಿಕ ಆದೇಶಕ್ಕೆ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು ಹಾಗೂ ಕಂದಾಯ ನಿರೀಕ್ಷಕ ಪ್ರಕಾಶ್ ಗ್ರಾಮಕ್ಕೆ ಭೇಟಿ ನೀಡಿ ಮುಖಂಡರ ಮನ ಹೊಲಿಸಿ ನಂತರ ಅಂತ್ಯಸಂಸ್ಕಾರಕ್ಕೆ ಅವಕಾಶ ಮಾಡಿಕೊಡಲಾಗಿದೆ.

ಹುಲ್ಲಹಳ್ಳಿ ಸಮೀಪ ಇರುವ ತರಗನಹಳ್ಳಿಯ ನಿವಾಸಿ ಕುಳ್ಳನಾಯಕನ ಕುಟುಂಬದ ಮೇಲೆ ನಾಲ್ಕು ವರ್ಷಗಳ ಹಿಂದೆ ಮುಖಂಡರು ಬಹಿಷ್ಕಾರ ಹೇರಿದ್ದರು. ಬಹಿಷ್ಕಾರವನ್ನು ತೆರುವುಗೊಳಿಸಲು ಕುಳ್ಳನಾಯಕ ಹುಲ್ಲಹಳ್ಳಿಯ ಪೊಲೀಸ್ ಠಾಣೆ ಸೇರಿದಂತೆ ಸರ್ಕಾರಿ ಕಛೇರಿಗೆ ಸಾಕಷ್ಟು ಅಲೆದಾಡಿದ್ದ ತಾಲ್ಲೂಕು ಆಡಳಿತ ಸೂಕ್ತವಾಗಿ ಸ್ಪಂದಿಸಿರಲಿಲ್ಲ. ನೆನ್ನೆ ಕುಳ್ಳನಾಯಕನ ಮಗ 15 ವರ್ಷದ ಮಾದೇಶ ಮೃತಪಟ್ಟಿದ್ದಾನೆ. ಅಂತ್ಯಸಂಸ್ಕಾರ ಮಾಡಲು ಗ್ರಾಮದಲ್ಲಿ ಅವಕಾಶ ನೀಡಿಲ್ಲ ಹಾಗೂ ಯಾರೂ ಸಹ ಮುಂದೆ ಬಂದಿಲ್ಲ. ಇದರಿಂದ



ನೊಂದ ಕುಳ್ಳನಾಯಕ ಮಗನ ಮೃತದೇಹವನ್ನು ಜಿಲ್ಲಾಧಿಕಾರಿಗಳ ಕಛೇರಿಗೆ ಕೊಂಡೊಯ್ಯಲು ಮುಂದಾಗಿದ್ದಾನೆ. ಈ ಮಾಹಿತಿ ಅರಿತ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅವರು, ಕುಳ್ಳನಾಯಕನ ಪರಿಸ್ಥಿತಿ ಅರಿತು ಕೂಡಲೇ ತಹಶೀಲ್ದಾರ್ ಗೆ ಸೂಚನೆ ನೀಡಿ ಅಂತ್ಯಕ್ರಿಯೆಗೆ ವ್ಯವಸ್ಥೆ ಮಾಡುವಂತೆ ತಿಳಿಸಿದ್ದಾರೆ. ಎಚ್ಚೆತ್ತ ತಹಶೀಲ್ದಾರ್ ಶಿವಕುಮಾರ್ ಕಾಸ್ನೂರು ಮತ್ತು ಆರ್ ಐ ಪ್ರಕಾಶ್ ರವರು ಗ್ರಾಮದ ಮುಖಂಡರ ಮನ ಹೊಲಿಸಿ ಅಂತ್ಯಕ್ರಿಯೆಗೆ ವ್ಯವಸ್ಥೆ ಮಾಡಿದ್ದಾರೆ. 21 ನೇ ಶತಮಾನಕ್ಕೆ ಕಾಲಿಟ್ಟರೂ ಬಹಿಷ್ಕಾರದ ಪಿಡುಗಿನಿಂದ ಹೊರಬರಲು ಸಾಧ್ಯವಾಗಿಲ್ಲ. ಜಿಲ್ಲಾಧಿಕಾರಿಗಳ ಮಧ್ಯ ಪ್ರವೇಶದಿಂದ ಸದ್ಯ ಅಂತ್ಯಕ್ರಿಯೆ ನಡೆಸಲಾಗಿದ್ದು ಮೃತದೇಹಕ್ಕೆ ಮುಕ್ತಿ ನೀಡಿದಂತಾಗಿದೆ.

ಮೊದಲನೇ ಪುಟದಿಂದ

ಚುನಾವಣೆ ನಂತರ ರಾಜ್ಯದಲ್ಲಿ ಜೆಡಿಎಸ್ ಪಕ್ಷ ಅಸ್ತಿತ್ವದಲ್ಲಿ ಇರಲ್ಲ

ಡಿಕೆಶಿ ಕಮಲ ನೀರಿನಲ್ಲಿದ್ದರೆ ಚಂದ, ಬತ್ತದ ತೆನೆಯು ಗದ್ದೆಯಲ್ಲಿದ್ದರೆ ಚಂದ, ಬಡ ಜನರ ಕಲ್ಯಾಣಕ್ಕಾಗಿ ದುಡಿಯುವ ಕೈ ಅಧಿಕಾರದಲ್ಲಿದ್ದರೆ ಚಂದವಾದ್ದರಿಂದ ಜಿಲ್ಲೆಯ ಜನತೆ ಮಂಡ್ಯ ಸೇರಿದಂತೆ ರಾಜ್ಯದ ಸಮಗ್ರವಾದ ಅಭಿವೃದ್ಧಿಗೆ ಕಾಂಗ್ರೆಸ್ ಅಭ್ಯರ್ಥಿಗಳ ಪರವಾಗಿ ಮತ ಚಲಾಯಿಸಿ ದೇಶದಲ್ಲಿ ಇಂಡಿಯಾ ಒಕ್ಕೂಟವು ಅಧಿಕಾರಕ್ಕೆ ಬರಲು ಪಣ ತೊಡಬೇಕು ಎಂದು ಕರೆ ನೀಡಿದರು.

ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯ ಸ್ವಾಮಿ, ರಾಜ್ಯದ ಮಾಜಿ ಸಚಿವ ಬಿ.ಸೋಮಶೇಖರ್, ಮಾಜಿ ಶಾಸಕ ಕೆ.ಬಿ.ಚಂದ್ರಶೇಖರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಬಿ. ನಾಗೇಂದ್ರ ಕುಮಾರ್, ಹರಳಹಳ್ಳಿ ವಿಶ್ವನಾಥ್, ಕೆಪಿಸಿಸಿ ಸದಸ್ಯ ಕಿಕ್ಕೇರಿ ಸುರೇಶ್, ಕಾಂಗ್ರೆಸ್ ನಾಯಕರಾದ ಬಿ. ಎಲ್.ದೇವರಾಜು, ವಿಜಯ್ ರಾಮೇಗೌಡ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾಧರ್ ಸಭೆಯಲ್ಲಿ ಮಾತನಾಡಿದರು.

ಸಭೆಯಲ್ಲಿ ಮಾಜಿಸಚಿವ ಪಿ.ಎಂ.ನರೇಂದ್ರ ಸ್ವಾಮಿ, ಮಾಜಿ ಶಾಸಕ ಬಿ.ಪ್ರಕಾಶ್, ಮಂಡ್ಯ ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಸುರೇಶ್, ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷ ಶೀಳನೆರೆ ಅಂಬರೀಶ್, ಜಿ.ಪಂ ಮಾಜಿ ಸದಸ್ಯರಾದ ಕೊಡಗಹಳ್ಳಿ ಮಂಜೇಗೌಡ, ಕೊಡಿಮಾರನಹಳ್ಳಿ ದೇವರಾಜು, ಲೋಹಿಯಾ ವಿಚಾರವಾದಿ ವೇದಿಕೆಯ ಅಧ್ಯಕ್ಷ ಮಳವಳ್ಳಿ ಶಿವಣ್ಣ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆಯರಾದ ಲೋಲಾಕ್ಷಿ, ಕೆ.ಬಿ.ಪ್ರತಿಮಾ, ಆದಿಹಳ್ಳಿಮೀನಾಕ್ಷಿ ಸೇರಿದಂತೆ 15 ಸಾವಿರಕ್ಕೂ ಹೆಚ್ಚಿನ ಜನರು ಸಭೆಯಲ್ಲಿ ಭಾಗವಹಿಸಿದ್ದರು.

ಇದೇ ಸಂಧರ್ಭದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದ ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷ ಶೀಳನೆರೆ ಅಂಬರೀಶ್ ಅವರನ್ನು ಪಕ್ಷಕ್ಕೆ ಬರಮಾಡಿಕೊಂಡರು. ಪುರಸಭೆಯ ಹಿರಿಯ ಸದಸ್ಯ ಕೆ.ಸಿ.ಮಂಜುನಾಥ್ ಅವರನ್ನು ಮುಖ್ಯ ಮಂತ್ರಿ ಸಿದ್ದರಾಮಯ್ಯ ಬೆನ್ನುತಟ್ಟಿ ಪ್ರೋತ್ಸಾಹಿಸಿದರು.

ಮಂಡ್ಯ ಸೊಸೆ ಮೈಸೂರಿನಲ್ಲಿ ಪ್ರಚಾರ

ಮೈಸೂರಿನ ಕೆ.ಆರ್ ಕ್ಷೇತ್ರದಲ್ಲಿ ನಡೆದ ನಾರಿಶಕ್ತಿ ಸಮಾವೇಶದಲ್ಲಿ ಸುಮಲತಾ ಅಂಬರೀಶ್ ಅವರು ಮಾತನಾಡಿ, ನಾನು ಮಂಡ್ಯದಲ್ಲಿ ಸ್ಪರ್ಧೆ ಮಾಡಿದ್ದಾಗ ನನ್ನ ನೆರೆವಿಗೆ ನಿಂತದ್ದೇ ನನ್ನ ಮಹಿಳೆಯರು. ಮೈಸೂರು ಅಂದರೆ ನಮಗೆ ಅವಿನಾಭಾವ ಸಂಬಂಧ ಇದೆ. ಅಂಬರೀಶ್ ಅವರು ಓದಿದ್ದು, ಬೆಳೆದಿದ್ದು ಇಲ್ಲಿಯೇ. ನಾವು ಇಲ್ಲಿ ಹಲವಾರು ಸಿನಿಮಾ ಚಿತ್ರೀಕರಣಕ್ಕೆ ಬರುತ್ತಿದ್ದೆವು. ಈ ಸುಂದರ, ಸಾಂಸ್ಕೃತಿಕ ನಗರ ಹೇಗೆ ಆಯ್ತು. ಇದು ಸ್ವಾತಂತ್ರ್ಯ ಪೂರ್ವದಲ್ಲೇ ಅಭಿವೃದ್ಧಿ ಹೊಂದಿದ ನಗರ ಇದಕ್ಕೆ ಯಾರು ಕಾರಣ, ಆಧುನಿಕ ನಗರ ನಿರ್ಮಾಣಕ್ಕೆ ಮೈಸೂರು ಮಹಾರಾಜರ ಕೊಡುಗೆ ಅಪಾರ ಎಂದು ಹೇಳಿದರು.

ಮೋದಿ ಅವರು ತಮ್ಮ ಸ್ವಾರ್ಥಕ್ಕಾಗಿ ಮಾಡುತ್ತಿಲ್ಲ. ನಮ್ಮ ದೇಶದ ಜನರಿಗಾಗಿ ಶ್ರಮಿಸುತ್ತಿದ್ದಾರೆ, ಮಹಿಳೆಯರಿಗೆ ಹಲವಾರು ಯೋಜನೆಗಳನ್ನ ಕೊಟ್ಟಿದ್ದಾರೆ, ಉಜ್ವಲ್ ಯೋಜನೆ ಸೇರಿದಂತೆ ಹಲವಾರು ಯೋಜನೆ ಕೊಟ್ಟು ಸ್ವಾಭಿಮಾನದ ಜೀವನ ನಡೆಸಲು ನೆರವಾಗಿದ್ದಾರೆ. ನಿಮ್ಮ ಬದುಕನ್ನ ಕಟ್ಟಿಕೊಳ್ಳುವ ಅವಕಾಶ ಮಾಡಿಕೊಟ್ಟಿದ್ದಾರೆ. ಮೋದಿ ಅವರು ಕನಸು ಕಂಡ್ರೆ ಅದನ್ನು ಕಾರ್ಯ ರೂಪಕ್ಕೆ ತರದೆ ಬಿಡಲ್ಲ, ಮೋದಿ ಅವರ ನೇತೃತ್ವದ ಸರ್ಕಾರ ಬಂದರೆ 140 ಕೋಟಿ ಭಾರತೀಯರಿಗೆ ಅನುಕೂಲ ಆಗುತ್ತದೆ ಎಂದು ಸುಮಲತಾ ಅಂಬರೀಶ್ ತಿಳಿಸಿದರು.

ಬಿಜೆಪಿ ಅಧಿಕಾರಕ್ಕೆ ಬಂದ ಮೇಲೆ ಮೈಸೂರಿನ ಅಭಿವೃದ್ಧಿಗೆ ಹಲವಾರು ಯೋಜನೆ ತಂದಿದ್ದಾರೆ. ಮುಂದಿನ 25 ವರ್ಷಗಳ ಅವಧಿಯಲ್ಲಿ ಭಾರತವನ್ನ ಪ್ರಪಂಚದ ನಂಬರ್ 1 ಮಟ್ಟಕ್ಕೆ ತೆಗೆದುಕೊಂಡು ಹೋಗುವ ಕನಸು ಹೊಂದಿರುವ ಮೋದಿಯವರ ಕೈ ಬಲಪಡಿಸಲು ನಾವೆಲ್ಲಾ ಶ್ರಮವಹಿಸಬೇಕಾಗಿದೆ. ಮೈಸೂರು, ಮಂಡ್ಯ,ಚಾಮರಾಜನಗರ, ಬೆಂಗಳೂರು ಜನರಿಗೆ ಒಂದಲ್ಲ ಒಂದು ರೀತಿ ಮೈಸೂರು ಮಹಾರಾಜರ ಕೊಡುಗೆ ಅವರ ಋಣ ನಮ್ಮ ಮೇಲಿದೆ. ಕೆಆರ್ ಎಸ್ ಆಣೆಕಟ್ಟುಯಿಂದ ಸಹಸ್ರಾರು ಜನರಿಗೆ ಅನುಕೂಲ ಆಗಿದೆ. ಅವರನ್ನ ಗೆಲ್ಲಿಸಿ ಲೋಕಸಭೆಗೆ ಕಳಿಸಿಕೊಡಿ ಎಂದು ಸುಮಲತಾ ಅಂಬರೀಶ್ ಮನವಿ ಮಾಡಿದರು.

ಅರಣ್ಯ ಇಲಾಖೆಯಿಂದ ವನ್ಯಜೀವಿ ಸಂರಕ್ಷಣೆ

ಶ್ರೀಮಠಗಳಿಂದ ಪ್ರಾಣಿಪಕ್ಷಿಗಳಿಗೆ ನೆರವಿನ ಆಸರೆ..

ಅರಣ್ಯ ಇಲಾಖೆಯಿಂದ 53 ಜಲಹೊಂಡ, 125 ನೀರಿನ ತೊಟ್ಟಿ ನಿರ್ಮಾಣ

■ ಕಾಯಕಯೋಗಿ ಸುದ್ದಿ
ಮಂಜುಸ್ವಾಮಿ ಕೊರಟಗೆರೆ

ಕೊರಟಗೆರೆ: ಬರಗಾಲದ ಬಿಸಿಲಿನ ತಾಪಕ್ಕೆ ಕಲ್ವತರು ಜಿಲ್ಲೆಯಲ್ಲೇ ಜನ ಮತ್ತು ಜಾನುವಾರುಗಳಿಗೆ ನೀರಿನ ಅಭಾವ ಸೃಷ್ಟಿಯಾಗಿದೆ. ಮೀಸಲು ಅರಣ್ಯದಲ್ಲಿ ಇರುವ ಕೆರೆಕಟ್ಟೆಗಳಲ್ಲಿ ನೀರಿಲ್ಲದೇ ಬರಡಾಗಿವೆ. ಕಾಡಿನಲ್ಲಿ ವಾಸಿಸುವ ಪ್ರಾಣಿಪಕ್ಷಿಗಳಿಗೆ ಆಹಾರ ಮತ್ತು ನೀರು ಇಲ್ಲದೇ ನಾಡಿಗೆ ಆಗಮಿಸುವ ಪರಿಸ್ಥಿತಿಯಿದೆ. ಕಾಡಿನ ಪ್ರಾಣಿ-ಪಕ್ಷಿ ನ